# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 118 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 18–11–2023 ಶನಿವಾರ | ಪುಟ: 4 | ಬೆಲೆ : ರೂ.2–00
Volume - 01 Issue - 118 | Title- Code: KARKAN 28269 | Chitradurga | Date: 18-11-2023 Saturday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಕತ್ತಿನ ಗಂಟು ಅದೃಷ್ಟದ ಗಂಟಲ್ಲ ಗಳಗಂಡ ರೋಗದ ನಂಟು 2

ಎಸ್.ಸಿ.ಪಿ, ಟಿ.ಎಸ್.ಪಿ ಕಾಲಮಿತಿಯಲ್ಲಿ ಅನುದಾನ ವೆಚ್ಚ ಮಾಡಲು ಸೂಚನೆ 3

ಯುವ ಸಂಸತ್ ಸ್ಪರ್ಧೆ; ವಿದ್ಯಾರ್ಥಿ ದೆಸೆಯಲ್ಲೇ ನಾಯಕತ್ವ ಬೆಳೆಸಿಕೊಳ್ಳಿ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

## ಆರ್.ಅಶೋಕ್ ವಿಧಾನಸಭೆ ವಿಪಕ್ಷ ನಾಯಕ



» **ಬೆಂಗಳೂರು**

ರಾಜ್ಯ ವಿಧಾನಸಭೆಯ ವಿರೋಧ ಪಕ್ಷದ ನಾಯಕನಾಗಿ ಪದ್ಮನಾಭನಗರದ ಶಾಸಕ, ಮಾಜಿ ಉಪ ಮುಖ್ಯಮಂತ್ರಿ ಆರ್.ಅಶೋಕ್ ಅವರನ್ನು ಆಯ್ಕೆ ಮಾಡಲಾಗಿದೆ.ಶುಕ್ರವಾರ ನಗರದ ಖಾಸಗಿ ಹೋಟೇ□□ನಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ನೇತೃತ್ವದಲ್ಲಿ ನಡೆದ ಬಿಜೆಪಿ ಶಾಸಕಾಂಗ ಪಕ್ಷದ ಸಭೆಯಲ್ಲಿ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಅವರು ಆರ್. ಅಶೋಕ್ ಹೆಸರನ್ನು ವಿಪಕ್ಷ ನಾಯಕನ ಸ್ಥಾನಕ್ಕೆ ಸೂಚಿಸಿದರೆ,ಮಾಜಿಸಚಿವವಿ.ಸುನೀಲ್‌ಕುಮಾರ್ ಅನುಮೋದಿಸಿದರು. ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಘೋಷಿಸಿದರು.ಶಾಸಕಾಂಗ ಪಕ್ಷದ ಸಭೆ ಆರಂಭಕ್ಕೂ ಮುನ್ನ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್, ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ದುಶ್ಯಂತ್ ಕುಮಾರ್ ಗೌತಮ್, ಪ್ರತ್ಯೇಕವಾಗಿ ಎಲ್ಲ ಶಾಸಕರನ್ನು ಕರೆದು ಅಭಿಪ್ರಾಯ ಸಂಗ್ರಹಿಸಿದರು. ಆದರೆ, ಇಂದು ಬೆಳಗ್ಗೆಯೆ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ, ಅಶೋ□□ರನ್ನು ದೂರವಾಣಿ ಮೂಲಕ ಸಂಪರ್ಕಿಸಿ, ವಿಪಕ್ಷ ನಾಯಕನ ಜವಾಬ್ದಾರಿ ವಹಿಸಿಕೊಳ್ಳಲು ಸಿದ್ಧವಿರುವಂತೆ ತಿಳಿಸಿದ್ದರು ಎನ್ನಲಾಗಿದೆ.ಬಿಜೆಪಿ ನಾಯಕರೊಂದಿಗೆ ಚರ್ಚೆ: ವಿರೋಧ ಪಕ್ಷದ ನಾಯಕರ ಆಯ್ಕೆ ವಿಚಾರಕ್ಕೆ ಸಂಬಂಧಿಸಿದಂತೆ ಶಾಸಕಾಂಗ ಪಕ್ಷದ ಸಭೆಗೂ ಮುನ್ನ ಬಿಜೆಪಿ ಹೈಕಮಾಂ□□ನ ಪ್ರತಿನಿಧಿಗಳಾಗಿ ರಾಜ್ಯಕ್ಕೆ ಆಗಮಿಸಿದ್ದ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹಾಗೂ ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ದುಶ್ಯಂತ್ ಕುಮಾರ್ ಗೌತಮ್, ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್.ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ ಹಾಗೂ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಜೊತೆ ಪ್ರತ್ಯೇಕವಾಗಿ ಮಾತುಕತೆ ನಡೆಸಿ ಅಭಿಪ್ರಾಯ ಸಂಗ್ರಹಿಸಿದರು.ಬೆಂಗಳೂರಿಗೆ ಶುಕ್ರವಾರ ಬೆಳಗ್ಗೆ ಆಗಮಿಸಿದ ನಿರ್ಮಲಾ ಸೀತಾರಾಮನ್ ಹಾಗೂ ದುಶ್ಯಂತ್ ಕುಮಾರ್ ಗೌತಮ್ ಮೊದಲು ಬಿಜೆಪಿ ಕಚೇರಿಗೆ ಭೇಟಿ ನೀಡಿದರು. ಆನಂತರ, ರಾಜ್ಯ ಬಿಜೆಪಿ ಸಂಘಟನಾ ಕಾರ್ಯದರ್ಶಿ ರಾಜೇಶ್ ಅವರೊಂದಿಗೆ ಡಾಲರ್ಸ್ ಕಾಲನಿಯಲ್ಲಿರುವ ಯಡಿಯೂರಪ್ಪ ಅವರ ನಿವಾಸಕ್ಕೆ ಭೇಟಿ ನೀಡಿ ಕುಶಲೋಪರಿ ವಿಚಾರಿಸಿ ಮಾತುಕತೆ ನಡೆಸಿದರು. ಆನಂತರ, ಆರ್.ಟಿ.ನಗರದಲ್ಲಿರುವ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ನಿವಾಸಕ್ಕೆ ಭೇಟಿ ನೀಡಿದ ಹೈಕಮಾಂಡ್ ಪ್ರತಿನಿಧಿಗಳು ವಿಪಕ್ಷ ನಾಯಕನ ಆಯ್ಕೆ ವಿಚಾರಕ್ಕೆ ಸಂಬಂಧಿಸಿದಂತೆ ಮಾತುಕತೆ ನಡೆಸಿದರು. ಬಳಿಕ ಬಿಜೆಪಿಯಲ್ಲಿ ಯಡಿಯೂರಪ್ಪ ಹಾಗೂ ವಿಜಯೇಂದ್ರ ವಿರುದ್ಧ ಬಹಿರಂಗವಾಗಿ ವಾಗ್ದಾಳಿ ನಡೆಸುತ್ತಿರುವ ಅತೃಪ್ತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ನಿವಾಸಕ್ಕೆ ಭೇಟಿ ಮಾಡಿ ಚರ್ಚೆ ನಡೆಸಿದ್ದು ಕುತೂಹಲಕ್ಕೆ ಕಾರಣವಾಯಿತು.

ಶಾಸಕಾಂಗ ಪಕ್ಷದ ಸಭೆಯಲ್ಲಿ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್, ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ದುಶ್ಯಂತ್ ಕುಮಾರ್ ಗೌತಮ್, ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್. ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ, ಮಾಜಿ ಸಚಿವ ಕೋಟ ಶ್ರೀನಿವಾಸ ಪೂಜಾರಿ, ಬಿಜೆಪಿ ರಾಜ್ಯ ಸಂಘಟನಾ ಪ್ರಧಾನ ಕಾರ್ಯದರ್ಶಿ ರಾಜೇಶ್ ವೇದಿಕೆ ಮೇಲೆ ಉಪಸ್ಥಿತರಿದ್ದರು.

# ದೇಶದಲ್ಲಿಯೇ ಅತ್ಯುತ್ತಮ ಸೌಲಭ್ಯ ಕರ್ನಾಟಕ ಪೊಲೀಸ್ ಹೊಂದಿದೆ: ಗೃಹ ಸಚಿವ ಪರಮೇಶ್ವರ

» **ಚಿತ್ರದುರ್ಗ**











ಕರ್ನಾಟಕ ಪೊಲೀಸ್ ಇತರೆ ರಾಜ್ಯಗಳನ್ನು ಹೋಲಿಸಿದಾಗ ದೇಶದಲ್ಲಿಯೇ ಅತ್ಯುತ್ತಮ ಹಾಗೂ ಆಧುನಿಕವಾದ ಸೌಲಭ್ಯಗಳನ್ನು ಹೊಂದಿದೆ ಎಂದು ಗೃಹ ಸಚಿವರಾದ ಡಾ. ಜಿ. ಪರಮೇಶ್ವರ ಹೇಳಿದರು.

ಇಲ್ಲಿನ ಬಸವೇಶ್ವರ ನಗರದ ಪೊಲೀಸ್ ವಸತಿ ಗೃಹದಲ್ಲಿ ರಾಜ್ಯ ಪೊಲೀಸ್, ರಾಜ್ಯ ಪೊಲೀಸ್ ವಸತಿ ಮತ್ತು ಮೂಲಭೂತ ಸೌಲಭ್ಯ ಅಭಿವೃದ್ಧಿ ನಿಗಮದ ವತಿಯಿಂದ ಜಿಲ್ಲೆಯ ಪೊಲೀಸ್ ಸಮುಚ್ಚಯ ಮತ್ತು ಚಿತ್ರದುರ್ಗ ಗ್ರಾಮಾಂತರ ಪೊಲೀಸ್ ಠಾಣೆ, ತಳಕು ಪೊಲೀಸ್ ಠಾಣೆಗಳ ನೂತನ ಕಟ್ಟಡ ಉದ್ಘಾಟನಾ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಇತ್ತೀಚೆಗೆ ನಿರ್ಮಾಣ ಮಾಡಲಾಗಿರುವ ಕೆಲವು ಪೊಲೀಸ್ ಸ್ಟೇಷನ್‌ಗಳನ್ನು ಐಟಿ ಕಂಪನಿಗಳ ರೀತಿಯಲ್ಲಿ ಅಚ್ಚುಕಟ್ಟಾಗಿ, ವ್ಯವಸ್ಥಿತವಾಗಿ ನಿರ್ಮಾಣ ಮಾಡಲಾಗಿದೆ ಎಂದು ಹೇಳಿದರು.

ತಂತ್ರಜ್ಞಾನದ ಸಹಾಯದಿಂದ ಪ್ರಸ್ತುತ ದಿನಗಳಲ್ಲಿ ಪೊಲೀಸರು ಅಪರಾಧಿಗಳನ್ನು ಶೀಘ್ರವೇ ಪತ್ತೆಹಚ್ಚುವ ಕೆಲಸ ಮಾಡುತ್ತಿದ್ದಾರೆ. ಪೊಲೀಸರು ಪ್ರಕರಣಗಳನ್ನು ತ್ವರಿತಗತಿಯಲ್ಲಿ ಭೇದಿಸುವಲ್ಲಿ ಸನ್ನದ್ಧರಾಗಿದ್ದಾರೆ ಎಂದರು.

ಪೊಲೀಸ್ ಗೃಹ 2025 ಕಾರ್ಯಕ್ರಮದಲ್ಲಿ ಇನ್ನೂ 10 ಸಾವಿರ ಮನೆ ನಿರ್ಮಾಣ ಮಾಡುವ ಗುರಿ ಇದೆ. ಪೊಲೀಸ್ ವಸತಿ ನಿಗಮದಲ್ಲಿ ರೂ.600 ಕೋಟಿ ಅನುದಾನವಿದ್ದು, ಹೆಚ್ಚಿನ ರೀತಿಯಲ್ಲಿ ಸುಂದರವಾದ ಪೊಲೀಸ್ ಸಮುಚ್ಚಯ ನಿರ್ಮಾಣ ಮಾಡಲಾಗುವುದು ಎಂದರು.

ದೇಶದ ಕಾನೂನು ವ್ಯವಸ್ಥೆ ರಕ್ಷಣೆ ಮಾಡಬೇಕಾದರೆ ಅದು ಪೊಲೀಸ್ ಅವರಿಂದ ಮಾತ್ರ ಸಾಧ್ಯ. ಪೊಲೀಸ್ ಇಲಾಖೆ ಶಿಸ್ತಿನ ಇಲಾಖೆಯಾಗಿದೆ. ಕಾನೂನು ರಕ್ಷಣೆ ಮಾಡುವ ಅಧಿಕಾರ ಪೊಲೀಸ್ ಇಲಾಖೆಗೆ ನೀಡಲಾಗಿದೆ. ಹಾಗಾಗಿ ಪೊಲೀಸರನ್ನು ನಾವು ಸರಿಯಾಗಿ ನೋಡಿಕೊಳ್ಳುವ ಅಗತ್ಯ ಬಹಳಷ್ಟಿದೆ ಎಂದು ಹೇಳಿದರು.

ಪೊಲೀಸ್ ಇಲಾಖೆಯಲ್ಲಿ 1.10 ಲಕ್ಷ ಸಿಬ್ಬಂದಿ ಇದ್ದು, ಇದರಲ್ಲಿ ಕನಿಷ್ಠ 70 ರಿಂದ 80 ಸಾವಿರ ಸಿಬ್ಬಂದಿಗೆ ಪೊಲೀಸ್ ವಸತಿ ಸಮುಚ್ಚಯನಿರ್ಮಾಣಮಾಡಿಕೊಡಬೇಕು ಎಂಬ ಸಂಕಲ್ಪ ಹೊಂದಿದ್ದು, ಒಂದು ಯೋಜನೆಯನ್ನಾಗಿ ಮಾಡಿ ವಸತಿ ಸಮುಚ್ಚಯ ನಿರ್ಮಾಣ ಕಾರ್ಯವನ್ನು ವ್ಯವಸ್ಥಿತವಾಗಿ ಮಾಡಿಕೊಡಲಾಗುವುದು ಎಂದರು.

ನಾನು ಮೂರನೇ ಬಾರಿಗೆ ಗೃಹ ಸಚಿವನಾಗಿ ಅಧಿಕಾರ ಸ್ವೀಕರಿಸಿದ್ದು, ಪೊಲೀಸ್ ಇಲಾಖೆಯಲ್ಲಿ ಬದಲಾವಣೆ ಮಾಡುವ ನಿಟ್ಟಿನಲ್ಲಿ "ಪೊಲೀಸ್ ಗೃಹ" ಯೋಜನೆಯನ್ನು ಮಾಡಿ 10 ಸಾವಿರ ಮನೆಗಳನ್ನು ಕಟ್ಟಲಾಗುತ್ತಿದೆ. ಪೊಲೀಸ್ ಕುಟುಂಬಕ್ಕೆ ಅನಿಲ ಸಂಪರ್ಕ, ತ್ಯಾಜ್ಯ ವಿಲೇವಾರಿ, ಆಧುನಿಕ ಮಾದರಿಯ ಕಿಚನ್ ಸೇರಿದಂತೆ ನವೀನ ಮಾದರಿಗೆ ಅನುಗುಣವಾಗಿ ಅತ್ಯುತ್ತಮ ಮನೆಗಳನ್ನು ನಿರ್ಮಾಣ ಮಾಡಲಾಗಿದೆ.

ಪ್ರಾರಂಭದಲ್ಲಿ ಒಂದು ಘಟಕ ವೆಚ್ಚಕ್ಕೆ ರೂ.16 ಲಕ್ಷ ಇತ್ತು, ಇದೀಗ ರೂ.20 ಲಕ್ಷಕ್ಕೆ ಏರಿಕೆಯಾಗಿದೆ. ಬಹಳ ಅಚ್ಚುಕಟ್ಟಾಗಿ, ವ್ಯವಸ್ಥಿತವಾಗಿ ಮನೆಗಳನ್ನು ನಿರ್ಮಾಣ ಮಾಡಿಕೊಡಲಾಗಿದೆ. ಪೊಲೀಸ್ ಸಮುಚ್ಚಯದಲ್ಲಿ ಪೊಲೀಸ್ ಸಿಬ್ಬಂದಿ ಅಗತ್ಯವಾದ ಉತ್ತಮ ಸೌಲಭ್ಯಗಳನ್ನು ಒದಗಿಸಿಕೊಡಲಾಗಿದೆ ಎಂದರು.

ಪೊಲೀಸ್ ಸಿಬ್ಬಂದಿಗೆ ಉತ್ತಮ ಸೌಲಭ್ಯ ಒದಗಿಸಿದರೆ ಅವರು ಒಳ್ಳೆಯ ಕೆಲಸಗಳನ್ನು ನಿರ್ವಹಿಸುತ್ತಾರೆ ಎಂದು ಹೇಳಿದ ಅವರು, ಪ್ರಸ್ತುತ ದಿನಗಳಲ್ಲಿ ಪೊಲೀಸ್ ಇಲಾಖೆ ಹೊಸ ಬದಲಾವಣೆ ಕಾಣುತ್ತಿದೆ. ಹೊಸ ರೂಪದಲ್ಲಿ ಅನೇಕ ರೀತಿಯ ಕ್ರೈಂಗಳು ಆಗುವುದಕ್ಕೆ ಪ್ರಾರಂಭವಾಗಿವೆ. ಸೈಬರ್ ಕ್ರೈಂ ವಿಶ್ವದಲ್ಲಿಯೇ ಹೊಸ ಆಯಾಮ ಪಡೆದುಕೊಂಡಿದೆ. ಇದಕ್ಕೆ ಅನುಗುಣವಾಗಿ ಪೊಲೀಸ್ ಇಲಾಖೆ ಕೂಡ ಆಧುನಿಕ ತಂತ್ರಜ್ಞಾನ ಹಾಗೂ ವೈಜ್ಞಾನಿಕವಾಗಿ ಅಪರಾಧ ಪತ್ತೆ ಕಾರ್ಯವನ್ನು ತ್ವರಿತವಾಗಿ ಮಾಡುತ್ತಿದೆ ಎಂದು ಹೇಳಿದರು.

15 ಸಾವಿರ ಕಾನ್ಸ್‌ಟೇಬಲ್ ಹುದ್ದೆಗಳು ಖಾಲಿ: ರಾಜ್ಯದಲ್ಲಿ ಪ್ರಸ್ತುತ 15 ಸಾವಿರ ಕಾನ್ಸ್‌ಟೇಬಲ್ ಹುದ್ದೆಗಳು ಖಾಲಿ ಇವೆ. ಕಳೆದ ನಾಲ್ಕು ವರ್ಷದಿಂದ ನೇಮಕಾತಿ ಪ್ರಕ್ರಿಯೆ ನಡೆದಿಲ್ಲ. ಪ್ರಸ್ತುತ ದಿನಗಳಲ್ಲಿ ಪೊಲೀಸ್ ಕಾನ್ಸ್‌ಟೇಬಲ್‌ಗಳ ಅಗತ್ಯತೆ ಇದೆ. ಪ್ರತಿ ವರ್ಷವೂ 3 ಸಾವಿರ ಪೊಲೀಸ್ ಸಿಬ್ಬಂದಿ ನಿವೃತ್ತಿ ಹೊಂದುತ್ತಿದ್ದಾರೆ. ಹಾಗಾಗಿ ಸ್ಥಗಿತಗೊಂಡಿದ್ದ ಪೊಲೀಸ್ ಕಾನ್ಸ್‌ಟೇಬಲ್‌ಗಳ ನೇಮಕಾತಿಗೆ ಚಾಲನೆ ನೀಡಲಾಗುವುದು ಗೃಹ ಸಚಿವ ಡಾ.ಜಿ.ಪರಮೇಶ್ವರ ತಿಳಿಸಿದರು.

ಪೊಲೀಸ್ ಕಾನ್ಸ್‌ಟೇಬಲ್‌ಗೆ ಕನಿಷ್ಠ ವಿದ್ಯಾರ್ಹತೆ ಎಸ್‌ಎಸ್‌ಎಲ್‌ಸಿ, ಪಿಯುಸಿ ವಿದ್ಯಾರ್ಹತೆಯಾಗಿದೆ. ಆದರೆ ಈ ಹುದ್ದೆಗೆ ಬಿಇ, ಎಂಬಿಎ, ಎಂಎ ಎಂಇಡಿ ಸೇರಿದಂತೆ ಶೇ.60ರಷ್ಟು ಅರ್ಜಿಗಳು ಸ್ನಾತಕೋತ್ತರ ಪದವಿ ಪಡೆದ ಅಭ್ಯರ್ಥಿಗಳೇ ಹೆಚ್ಚಾಗಿ ಅರ್ಜಿ ಸಲ್ಲಿಸುತ್ತಾರೆ. ಇದರ ಅರ್ಥ ಪೊಲೀಸ್ ಹುದ್ದೆ ಕೂಡ ಗೌರವಯುತವಾಗಿದೆ ಎಂಬುದಕ್ಕೆ ಇದು ಸಾಕ್ಷಿ ಎಂದು ಅಭಿಪ್ರಾಯಪಟ್ಟರು.

ಪ್ರತಿಯೊಬ್ಬರಿಗೂ ಸಾಮಾಜಿಕ ನ್ಯಾಯ ಎನ್ನುವ ಉದ್ದೇಶದಿಂದ ನಮ್ಮ ಸರ್ಕಾರ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದ್ದು ಈವರೆಗೆ 25 ಕೋಟಿ ಜನ ಉಚಿತವಾಗಿ ಬಸ್‌ನಲ್ಲಿ ಪ್ರಯಾಣಿಸಿದ್ದಾರೆ. ಗೃಹಲಕ್ಷ್ಮಿ ಯೋಜನೆ ಮಹಿಳೆಯರನ್ನು ಸಬಲರನ್ನಾಗಿ, ಸ್ವಾವಲಂಬಿಯನ್ನಾಗಿ ಮಾಡುತ್ತಿದೆ ಎಂದರು.

ಪೊಲೀಸ್ ಇಲಾಖೆಯ ಪ್ರಗತಿ ಪರಿಶೀಲನೆ ಸಂದರ್ಭದಲ್ಲಿ ಕಂಡುಬಂದ ಅಂಶವೆಂದರೆ, ರೈತರ ಆತ್ಮಹತ್ಯೆ ಪ್ರಕರಣಗಳು ಕಡಿಮೆಯಾಗುತ್ತಿವೆ ಎಂಬುದು ಗಮನಾರ್ಹವಾಗಿದೆ. ನಮ್ಮ ಸರ್ಕಾರ ನೀಡುತ್ತಿರುವ ಉಚಿತ ವಿದ್ಯುತ್, ಅನ್ನಭಾಗ್ಯ, ಗೃಹಲಕ್ಷ್ಮಿ, ಶಕ್ತಿ ಮುಂತಾದ ಯೋಜನೆಗಳು ರೈತರಿಗೆ ತಲುಪುವಂತಹ ಯೋಜನೆಯಾಗಿವೆ. ಜನರ ಹಣ ಜನರಿಗೆ ಕೊಡುತ್ತಿದ್ದೇವೆ, ಹೀಗಾಗಿ ಇದು ಸರ್ಕಾರಕ್ಕೆ ನಷ್ಟ ಎಂದು ಪರಿಗಣಿಸುವುದು ಸರಿಯಲ್ಲ ಎಂದು ಗೃಹ ಸಚಿವರು ಹೇಳಿದರು.

ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಮಾತನಾಡಿ, ಚಿತ್ರದುರ್ಗ ಹಾಗೂ ಹಿರಿಯೂರು ನಗರಕ್ಕೆ ಪೊಲೀಸ್ ವಸತಿ ಸಮುಚ್ಚಯ ಹಾಗೂ ಚಳ್ಳಕೆರೆ, ಹಿರಿಯೂರು ನಗರಕ್ಕೆ ಸಂಚಾರಿ ಪೊಲೀಸ್ ಠಾಣೆ ಅಗತ್ಯವಾಗಿ ಬೇಕಾಗಿದೆ. ಇದರ ಜೊತೆಗೆ ಹೊಸದುರ್ಗದಲ್ಲಿ ಹೆಚ್ಚುವರಿ ಪೊಲೀಸ್ ಠಾಣೆ, ಚಿಕ್ಕಜಾಜೂರಿನಲ್ಲಿ ಪೊಲೀಸ್ ಠಾಣೆ ಸ್ಥಾಪನೆಗೆ ಅವಕಾಶ ಮಾಡಿಕೊಡಬೇಕು. ಇದರಿಂದ ಆಡಳಿತ ಸುಗಮವಾಗಲು ಅನುಕೂಲವಾಗಲಿದೆ ಎಂದು ಗೃಹ ಸಚಿವರಿಗೆ ಮನವಿ ಮಾಡಿದರು.ಬೆಂಗಳೂರು ಕೆ.ಎಸ್.ಪಿ.ಹೆಚ್ ಮತ್ತು ಐ.ಡಿ.ಸಿ.ಎಲ್ ಅಧ್ಯಕ್ಷರು ಹಾಗೂ ವ್ಯವಸ್ಥಾಪಕ ನಿರ್ದೇಶಕ ಕೆ.ರಾಮಚಂದ್ರರಾವ್ ಮಾತನಾಡಿ, ಚಿತ್ರದುರ್ಗ ಜಿಲ್ಲೆಯಲ್ಲಿ 72 ಪೊಲೀಸ್ ವಸತಿ ಗೃಹಗಳು ಹಾಗೂ ಚಿತ್ರದುರ್ಗ ಗ್ರಾಮಾಂತರ ಪೊಲೀಸ್ ಠಾಣೆ, ತಳಕು ಪೊಲೀಸ್ ಠಾಣೆಗಳನ್ನು ರೂ. 25 ಕೋಟಿ ವೆಚ್ಚದಲ್ಲಿ ನಿರ್ಮಾಣ ಮಾಡಲಾಗಿದೆ. ರಾಜ್ಯ ಪೊಲೀಸ್ ವಸತಿ ಮತ್ತು ಮೂಲಭೂತ ಸೌಲಭ್ಯ ಅಭಿವೃದ್ಧಿ ನಿಗಮದ ವತಿಯಿಂದ ಇಲ್ಲಿಯವರೆಗೂ 31 ಸಾವಿರ ಪೊಲೀಸ್ ವಸತಿ ಗೃಹಗಳನ್ನು ನಿರ್ಮಾಣ ಮಾಡಲಾಗಿದೆ ಎಂದು ತಿಳಿಸಿದರು.

ಪೊಲೀಸ್ ಠಾಣೆಗಳನ್ನು ಸ್ವಾಫ್ಟ್‌ವೇರ್ ಕಂಪನಿ ಕಚೇರಿಗಳ ಮಾದರಿಯಲ್ಲಿ ಕಟ್ಟಲಾಗಿದ್ದು, ಇದರಲ್ಲಿ ವಿವಿಧ ಸೌಲಭ್ಯಗಳನ್ನು ಕೂಡ ಕಲ್ಪಿಸಲಾಗಿದೆ. ಬೇರೆ ರಾಜ್ಯಕ್ಕೆ ಹೋಲಿಕೆ ಮಾಡಿದರೆ ನಮ್ಮ ಕರ್ನಾಟಕದ ಪೊಲೀಸ್ ಠಾಣೆಗಳು ಹಾಗೂ ಪೊಲೀಸ್ ವಸತಿ ಗೃಹಗಳು ಅತ್ಯುತ್ತಮ ಸೌಲಭ್ಯ ಹೊಂದಿವೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಶಾಸಕರಾದ ಕೆ.ಸಿ. ವೀರೇಂದ್ರ ಪಪ್ಪಿ, ಟಿ.ರಘುಮೂರ್ತಿ, ಬಿ.ಜಿ.ಗೋವಿಂದಪ್ಪ, ದಾವಣಗೆರೆ ಪೂರ್ವ ವಲಯದ ಉಪ ಪೊಲೀಸ್ ಮಹಾ ನಿರೀಕ್ಷಕ ಡಾ.ಕೆ.ತ್ಯಾಗರಾಜ್, ಜಿಲ್ಲಾಧಿಕಾರಿ ದಿವ್ಯಪ್ರಭು ಜಿಆರ್‌ಜೆ, ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಸ್. ಜೆ.ಸೋಮಶೇಖರ್, ಜಿಲ್ಲಾ ಪೊಲೀಸ್ ಅಧೀಕ್ಷಕ ಧರ್ಮೇಂದ್ರ ಕುಮಾರ್ ಮೀನಾ, ಮಾಜಿ ಸಚಿವ ಹೆಚ್.ಆಂಜನೇಯ, ಮಾಜಿ ಸಂಸದ ಬಿ.ಎನ್.ಚಂದ್ರಪ್ಪ ಸೇರಿದಂತೆ ಮತ್ತಿತರರು ಇದ್ದರು. ಪೊಲೀಸ್ ವಸತಿ ಸಮುಚ್ಚಯ ಆವರಣದಲ್ಲಿ ರಾಜ್ಯ ಗೃಹ ಸಚಿವರಾದ ಡಾ. ಜಿ. ಪರಮೇಶ್ವರ್, ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಸೇರಿದಂತೆ ಗಣ್ಯರು ಇದೇ ಸಂದರ್ಭದಲ್ಲಿ ಸಾಂಕೇತಿಕವಾಗಿ ಗಿಡಗಳನ್ನು ನೆಟ್ಟು ನೀರೆರೆದರು.

## ಪ್ರಮುಖ ಸುದ್ದಿ

### ಜಿಲ್ಲಾ ಪೊಲೀಸ್ ಇಲಾಖೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಡಾ.ಜಿ.ಪರಮೇಶ್ವರ್ ಹೇಳಿಕೆ

# ರೌಡಿಗಳಿಗೆ ಕಡಿವಾಣ, ಸೈಬರ್ ಅಪರಾಧ ತಡೆಗೆ ಕ್ರಮ ಕೈಗೊಳ್ಳಿ

» **ಚಿತ್ರದುರ್ಗ**



ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ರೌಡಿಗಳ ಹಾವಳಿಗೆ ಕಡಿವಾಣ ಹಾಕಬೇಕು, ಸೈಬರ್ ಕ್ರೈಂ ಬಗ್ಗೆ ಜನಜಾಗೃತಿ ಮೂಡಿಸಿ ಅಪರಾಧ ತಡೆಗಟ್ಟಬೇಕು ಹಾಗೂ ಡ್ರಗ್ಸ್ ಪ್ರಕರಣಗಳಲ್ಲಿ ಕಠಿಣ ಕ್ರಮ ಜರುಗಿಸಬೇಕು ಎಂದು ಗೃಹ ಸಚಿವರಾದ ಡಾ. ಜಿ. ಪರಮೇಶ್ವರ್ ಅವರು ಪೊಲೀಸ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲಾ ಪೊಲೀಸ್ ಅಧೀಕ್ಷಕರ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಏರ್ಪಡಿಸಿದ ಪೊಲೀಸ್ ಇಲಾಖೆ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಡ್ರಗ್ಸ್ ಮುಕ್ತ ಕರ್ನಾಟಕ ನಿರ್ಮಾಣ ಮಾಡುವುದು ಸರ್ಕಾರದ ಗುರಿಯಾಗಿದೆ. ರಾಜ್ಯದಲ್ಲಿ ಡ್ರಗ್ಸ್ ಸಂಪೂರ್ಣವಾಗಿ ಮಟ್ಟ ಹಾಕಬೇಕು. ಈ ನಿಟ್ಟಿನಲ್ಲಿ ಚಿತ್ರದುರ್ಗ ಜಿಲ್ಲೆಯು ರಾಜ್ಯದಲ್ಲಿ ಮಾದರಿಯಾಗಿ ಹೊರ ಹೊಮ್ಮಬೇಕು. ಪೆಡ್ಲರ್‌ಗಳು ಹೊರ ರಾಜ್ಯಗಳಿಂದ ವಿವಿಧ ಬಗೆಯ ಡ್ರಗ್ಸ್ ಸರಬರಾಜು ಮಾಡುತ್ತಿರುತ್ತಾರೆ. ಈ ಕುರಿತಂತೆ ಚಲನವಲನಗಳ ಮೇಲೆ ಸೂಕ್ಷ್ಮವಾಗಿ ನಿಗಾವಹಿಸಬೇಕು. ಹೊರ ರಾಜ್ಯದ ಗಡಿಗಳಲ್ಲಿ ತಪಾಸಣೆಯನ್ನು ತೀವ್ರಗೊಳಿಸಬೇಕು. ಹೆಚ್ಚಾಗಿ ಕಾಲೇಜು ವಿದ್ಯಾರ್ಥಿಗಳು ಡ್ರಗ್ಸ್ ಚಟಗಳಿಗೆ ಮಾರು ಹೋಗುತ್ತಿದ್ದು, ಅವರ ಚಟುವಟಿಕೆಗಳ ಮೇಲೆ ನಿಗಾವಹಿಸುವುದು ಅಗತ್ಯ. ಡ್ರಗ್ಸ್ ಸೇವಿಸುವವರು ಅಥವಾ ಪೂರೈಕೆ ಮಾಡುವವರು ಸಿಕ್ಕಿಬಿದ್ದರೆ, ಮೂಲ ಆರೋಪಿಯನ್ನು ಪತ್ತೆ ಹಚ್ಚುವವರೆಗೂ ತನಿಖೆ ಕೈಗೊಳ್ಳಬೇಕು. ಡ್ರಗ್ಸ್ ಸೇವನೆ ತಪ್ಪು, ಅದರಿಂದ ಉಂಟಾಗುವ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ಜಾಗೃತಿ ಮೂಡಿಸಬೇಕು ಎಂದು ಸಚಿವರು ಸೂಚನೆ ನೀಡಿದರು. ಮನೆ ಕಳ್ಳತನ, ಸುಲಿಗೆ, ದರೋಡೆ ಪ್ರಕರಣಗಳನ್ನು ಮಟ್ಟ ಹಾಕಲು, ಆರೋಪಿಗಳ ಚಲವಲನದ ಮೇಲೆ ನಿಗಾವಹಿಸಲು ಪೊಲೀಸರ ಗಸ್ತು ತಿರುಗುವುದು ಹೆಚ್ಚಾಗಬೇಕು. ಠಾಣೆಗಳಲ್ಲಿ ಹೆಲ್ಪಿಂಗ್ ಡೆಸ್ಕ್, ಸಿ.ಸಿ ಕ್ಯಾಮರಾ ಇರಬೇಕು. ದೂರು ನೀಡಲು ಠಾಣೆಗೆ ಬರುವ ಜನರ ಸಮಸ್ಯೆಗಳನ್ನು ಪೊಲೀಸ್ ಅಧಿಕಾರಿಗಳು ತಾಳ್ಮೆವಹಿಸಿ ಆಲಿಸಬೇಕು. ಠಾಣೆಗಳಲ್ಲಿ ಜನರ ದೂರುಗಳಿಗೆ, ಸ್ಪಂದಿಸುವ ಕಾರ್ಯವಾಗಬೇಕು, ಒಟ್ಟಾರೆ ಪೊಲೀಸ್ ಠಾಣೆಗಳಲ್ಲಿ 'ಜನಸ್ನೇಹಿ ಪೊಲೀಸ್' ವಾತಾವರಣ ನಿರ್ಮಾಣ ಮಾಡಬೇಕು ಎಂದರು.ಕಿಡಿಗೇಡಿಗಳು ಧರ್ಮ, ಜಾತಿ ಹೆಸರಲ್ಲಿ ಅವಹೇಳನಕಾರಿ ಪೋಸ್ಟ್‌ಗಳನ್ನು ಸೃಷ್ಟಿಸಿ ಗಲಭೆ ಉಂಟು ಮಾಡಲು ಸಾಮಾಜಿಕ ಜಾಲತಾಣದಲ್ಲಿ ಹರಿಯಬಿಡುತ್ತಿರುತ್ತಾರೆ.


ಪುಟ 2

## ಫಾಸ್ಟ್ ನ್ಯೂಸ್

### 19ರಂದು ಕನ್ನಡ ರಾಜ್ಯೋತ್ಸವ ಸಂಭ್ರಮ

» **ಚಿತ್ರದುರ್ಗ**

ಚಿತ್ರದುರ್ಗದ ಗಮಕ ಕಲಾಭಿಮಾನಿಗಳ ಸಂಘವು ಉದಯವಾಗಿ 40 ವರ್ಷಗಳು ಪೂರ್ಣಗೊಂಡಿವೆ. ಪ್ರಯುಕ್ತ ನಗರದ ಇನ್ನರ್ ವ್ಹೀಲ್ ಕ್ಲಬ್ ಹಾಗೂ ವಾಸವಿ ಕ್ಲಬ್ ಸಹಯೋಗದೊಂದಿಗೆ 19 ರಂದು ನಗರದ ಗಾಯತ್ರಿ ಶಿವರಾಂ ಇನ್ನರ್ ವ್ಹೀಲ್ ಕ್ಲಬ್‌ನಲ್ಲಿ 'ಕನ್ನಡ ರಾಜ್ಯೋತ್ಸವ ಸಂಭ್ರಮ' ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ. ಕನ್ನಡ ನಾಡು, ನುಡಿ,ಸಂಸ್ಕೃತಿಯನ್ನು ಬಿಂಬಿಸುವ ಕನ್ನಡ ಗೀತೆಗಳೊಂದಿಗೆ, ಹರಿದಾಸ ಕೀರ್ತನೆಗಳು, ವಚನಗಳು ಮುಂತಾದುವುಗಳ ಗಾಯನವಿರುತ್ತದೆ. ತಾವೆಲ್ಲರೂ ಸಮಯಕ್ಕೆ ಸರಿಯಾಗಿ ಆಗಮಿಸಿ ತಾಯಿ ಕನ್ನಡ ಭುವನೇಶ್ವರಿಯ ನುಡಿ ರಥೋತ್ಸವದಲ್ಲಿ ಪಾಲ್ಗೊಳ್ಳಬೇಕಾಗಿ ಪ್ರಾರ್ಥಿಸಿದ್ದಾರೆ.ಹಾಗೆಯೇ ನೀವು ಬರುವ ಜತೆಗೆ ಸ್ನೇಹಿತರು, ಬಂಧುಗಳು, ಹಿತೈಷಿಗಳನ್ನು ಕರೆತಂದರೆ ಸಮಾರಂಭಕ್ಕೆ ಶೋಭೆ ಬರುತ್ತದೆ ಎಂದು ಪ್ರಕಟಣೆ ತಿಳಿಸಿದೆ.

### ಅರ್ಜಿ ಆಹ್ವಾನ

» **ಚಿತ್ರದುರ್ಗ**

2023-24ನೇ ಸಾಲಿನ ಹಾಲು ಉತ್ಪಾದಕರಿಗೆ ಉತ್ತೇಜನ ಕಾರ್ಯಕ್ರಮದ ಉಳಿಕೆ ಅನುದಾನದಡಿ ಎಸ್‌ಸಿಪಿಮತ್ತುಟಿಎಸ್‌ಪಿಫಲಾನುಭವಿಗಳಿಗೆಒಂದು ಮಿಶ್ರ ತಳಿ ಹಸು ಘಟಕ ವಿತರಿಸುವ ಕಾರ್ಯಕ್ರಮ ಸರ್ಕಾರದಿಂದ ಅನುಮೋದನೆಯಾಗಿದ್ದು, ಸರ್ಕಾರದ ಮಾರ್ಗಸೂಚಿಯನ್ವಯ ತಾಲ್ಲೂಕುವಾರು ಗುರಿ ನಿಗದಿಪಡಿಸಲಾಗಿದೆ. ಈ ಯೋಜನೆ ಅನುಷ್ಠಾನಗೊಳಿಸಲು ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ಫಲಾನುಭವಿಗಳು ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ ಆಯಾ ತಾಲ್ಲೂಕಿನ ಪಶುಆಸ್ಪತ್ರೆ ಮುಖ್ಯ ಪಶುವೈದ್ಯಾಧಿಕಾರಿಗಳಿಗೆ ನವೆಂಬರ್ 25 ರೊಳಗಾಗಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಅನುಷ್ಠಾನಾಧಿಕಾರಿಗಳ ದೂರವಾಣಿ ಸಂಖ್ಯೆ ಚಿತ್ರದುರ್ಗ 9482943111, ಚಳ್ಳಕೆರೆ 9448816499, ಹೊಳಲ್ಕೆರೆ 8073900950, ಹೊಸದುರ್ಗ 9945298407, ಹಿರಿಯೂರು 9483451044, ಮೊಳಕಾಲ್ಮೂರು 9900964820 ಗೆ ಸಂಪರ್ಕಿಸಬಹುದು ಎಂದು ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ ಉಪ ನಿರ್ದೇಶಕರು ತಿಳಿಸಿದ್ದಾರೆ.

### ಸಂಘ, ಸಂಸ್ಥೆಗಳ ಲೆಕ್ಕಪತ್ರ ದಾಖಲೆ ಸಲ್ಲಿಸಿ, ಸ್ವೀಕೃತಿ ಪಡೆಯಲು ಸೂಚನೆ

» **ಚಿತ್ರದುರ್ಗ**

ಸಹಕಾರ ಸಂಘಗಳ ನಿಬಂಧಕರ ಸುತ್ತೋಲೆ 2023ರ ಆಗಸ್ಟ್ 30ರ ರೀತ್ಯಾ ಕರ್ನಾಟಕ ಸಂಘಗಳ ನೊಂದಣಿ ಕಾಯ್ದೆ 1960 ರಡಿಯಲ್ಲಿ ನೊಂದಣಿಯಾದ ಪ್ರತಿಯೊಂದು ಸಂಘ, ಸಂಸ್ಥೆಯು ಕಲಂ 13 ರಂತೆ ಸಂಬಂಧಿಸಿದ ದಾಖಲಾತಿಗಳನ್ನು ಪ್ರಾಧಿಕಾರಕ್ಕೆ ಸಲ್ಲಿಸಿ ಸ್ವೀಕೃತಿ ಪತ್ರ ಪಡೆಯಬೇಕಾಗಿರುತ್ತದೆ. ಆದರೆ ಅನೇಕ ಸಂಘ ಸಂಸ್ಥೆಗಳು ಐದು ವರ್ಷಗಳಿಗೂ ಮೇಲ್ಪಟ್ಟು ದಾಖಲಾತಿಗಳನ್ನು ಸಲ್ಲಿಸಿ, ಸ್ವೀಕೃತಿ ಪತ್ರ ಪಡೆಯಲು ಬಾಕಿ ಇದ್ದು, ಸಂಘ ಸಂಸ್ಥೆಗಳ ಸದಸ್ಯರ ಹಿತದೃಷ್ಟಿಯಿಂದ ಮತ್ತೊಂದು ಬಾರಿ ಅವಕಾಶ ನೀಡಿ, ಪ್ರತಿ ವರ್ಷಕ್ಕೆ ಹೆಚ್ಚುವರಿ ರೂ.3000/- ಗಳ ದಂಡ ವಿಧಿಸಿ 2024ರ ಜೂನ್ 30 ರವರೆಗೆ ಸ್ವೀಕೃತಿ ಪಡೆಯಲು ಅವಕಾಶ ನೀಡಲಾಗಿದೆ ಎಂದು ಸಂಘಗಳ ಜಿಲ್ಲಾ ನೋಂದಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅಕ್ರಮವಾಗಿ ಸಾಗಿಸುತ್ತಿದ್ದ 475 ಗ್ರಾಂ ತೂಗದ ಗಾಂಜಾ ವಶ



» **ಚಳ್ಳಕೆರೆ**

ತಾಲ್ಲೂಕಿನ ತಳಕು ಹೋಬಳಿ ವ್ಯಾಪ್ತಿಯ ಮಲ್ಲೂರಹಳ್ಳಿ ಮತ್ತು ಅಬ್ಬೇನಹಳ್ಳಿ ಗ್ರಾಮ ವ್ಯಾಪ್ತಿಯಲ್ಲಿ ಅಕ್ರಮವಾಗಿ ಗಾಂಜಾ ಸಾಗಿಸುತ್ತಿದ್ದ ವ್ಯಕ್ತಿಯನ್ನು ವಶ ಪಡೆದು ಅವನಿಂದ ಸುಮಾರು 475 ಗ್ರಾಂ ಒಣ ಗಾಂಜಾ ವಶಪಡಿಸಿಕೊಳ್ಳಲಾಗಿದೆ. ಈ ಬಗ್ಗೆ ಮಾಹಿತಿ ನೀಡಿದ ಅಬಕಾರಿ ನಿರೀಕ್ಷಕ ಸಿ.ನಾಗರಾಜು, ತಾಲ್ಲೂಕು ವ್ಯಾಪ್ತಿಯಲ್ಲಿ ಗಸ್ತಿನಲ್ಲಿರುವಾಗ ಮೊಳಕಾಲ್ಮೂರು ತಾಲ್ಲೂಕಿನ ನೇತ್ರನಹಳ್ಳಿ ಗ್ರಾಮದ ಬೋಸಯ್ಯ ತಮ್ಮ ಬೈಕ್ ನಲ್ಲಿ ಒಣ ಗಾಂಜಾವನ್ನು ಇಟ್ಟು ಸಾಗಿಸುವಾಗ ನಮ್ಮನ್ನು ಕಂಡು ಓಡಿಹೋಗಲು ಪ್ರಯತ್ನಿಸುತ್ತಿದ್ದಾಗ ಅನುಮಾನಗೊಂಡು ತಪಾಸಣೆ ನಡೆಸಿದಾಗ ಆರೋಪಿ ಒಂದು ಪ್ಲಾಸ್ಟಿಕ್ ಚೀಲದಲ್ಲಿ ಸುಮಾರು 475ಗ್ರಾಂ ಒಣ ಗಾಂಜಾವನ್ನು ಸಾಗಿಸುತ್ತಿದ್ದು ಕಂಡುಬಂದಿದೆ. ಕೂಡಲೇ ವ್ಯಕ್ತಿಯನ್ನು ಬಂಧಿಸಿ ಆತನಿಂದ ಸುಮಾರು1.20ಲಕ್ಷ ಮೌಲ್ಯದ ಒಂದು ಬೈಕ್ ಹಾಗೂ ಗಾಂಜಾವನ್ನು ವಶಪಡಿಸಿಕೊಂಡು ಆರೋಪಿಯನ್ನು ನ್ಯಾಯಾಂಗ ವಶಕ್ಕೆ ನೀಡಲಾಗಿದೆ ಎಂದು ತಿಳಿಸಿದ್ದಾರೆ. ಉಪ ನಿರೀಕ್ಷಕ ಟಿ.ರಂಗಸ್ವಾಮಿ, ಡಿ.ಟಿ.ತಿಪ್ಪಯ್ಯ, ಪೇದೆಗಳಾದ ನಾಗರಾಜ್.ಸೋಮಶೇಖರ ದಾಳಿ ವೇಳೆ ಪಾಲ್ಗೊಂಡಿದ್ದರು.

---

## ಕತ್ತಿನ ಗಂಟು ಅದೃಷ್ಟದ ಗಂಟಲ್ಲ ಗಳಗಂಡ ರೋಗದ ನಂಟು

# ಅಯೋಡಿನ್‌ಯುಕ್ತ ಉಪ್ಪು ಬಳಸಿ: ಡಾ.ಗಿರೀಶ್

» **ಚಿತ್ರದುರ್ಗ**

ಅಯೋಡಿನ್ ಒಂದು ಸೂಕ್ಷ್ಮ ಪೋಷಕಾಂಶ. ನಮ್ಮ ದೇಹಕ್ಕೆ ಅಗತ್ಯವಾಗಿ ಬೇಕೇ ಬೇಕಾಗಿರುವಂತಹ ಪ್ರಕೃತಿಯಿಂದ ದೊರೆಯುವಂತಹ ನ್ಯೂಟ್ರಿಯಂಟ್ ಆಗಿದೆ ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು.

ತಾಲೂಕಿನ ಚಿಕ್ಕಬೆನ್ನೂರು ಗ್ರಾಮದ ಬಸವೇಶ್ವರ ಪ್ರೌಢಶಾಲೆಯ ಆವರಣದಲ್ಲಿ ಶುಕ್ರವಾರ ತಾಲ್ಲೂಕು ಆರೋಗ್ಯ ಅಧಿಕಾರಿಗಳ ಕಚೇರಿ ವತಿಯಿಂದ ಪ್ರೌಢಶಾಲೆಯ ಮಕ್ಕಳಿಗೆ ರಾಷ್ಟ್ರೀಯ ಅಯೋಡಿನ್ ಕೊರತೆ ರೋಗಗಳ ನಿಯಂತ್ರಣ ಕಾರ್ಯಕ್ರಮದ ಅಡಿಯಲ್ಲಿ ಮಾಹಿತಿ ಶಿಕ್ಷಣ ಸಂವಹನ ಕಾರ್ಯಕ್ರಮ ಕುರಿತು ಅವರು ಮಾತನಾಡಿದರು.

ಪ್ರತಿನಿತ್ಯ ನಮ್ಮ ದೇಹಕ್ಕೆ 120 ರಿಂದ 150 ಮೈಕ್ರೋಗ್ರಾಮಿನಷ್ಟು ಅಯೋಡಿನ್ ಅವಶ್ಯಕತೆ ಇರುತ್ತದೆ. ಅಗತ್ಯಕ್ಕಿಂತ ಕಡಿಮೆ ಸೇವಿಸಿದಲ್ಲಿ ಅಯೋಡಿನ್ ಕೊರತೆ ಉಂಟಾಗುತ್ತದೆ. ಇದರ ಕೊರತೆಯಿಂದ ಮಕ್ಕಳಲ್ಲಿ ಬುದ್ಧಿಮಾಂದ್ಯತೆ ಕಲಿಕೆಯಲ್ಲಿ ಹಿಂದುಳಿಯುವಿಕೆ ದೈಹಿಕ ಮತ್ತು ಮಾನಸಿಕ ವಿಕಲತೆ ಕಿವುಡು ಮತ್ತು ಮೂಕತನ ಮೆಳ್ಳೆಗಣ್ಣು ನಡಿಗೆಯಲ್ಲಿ ಲೋಪದೋಷಗಳು ಉಂಟಾಗುತ್ತವೆ.



ವಯಸ್ಕರಲ್ಲಿ ನಿಶಕ್ತಿ ಕಾರ್ಯ ನಿರ್ವಹಣೆಯ ವೈಫಲ್ಯ ಗಳಗಂಡ ರೋಗ ಬರುತ್ತದೆ. ಕತ್ತಿನ ಗಂಟು ಅದೃಷ್ಟದ ಗಂಟಲ್ಲ ಗಳಗಂಡ ರೋಗದ ನಂಟು ಅಯೋಡಿನ್ ಯುಕ್ತ ಉಪ್ಪನ್ನು ಬಳಸಿ ಎಂದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಮಾತನಾಡಿ, ಅಯೋಡಿನ್ ಕೊರತೆಯು ಆಹಾರದಲ್ಲಿ ಅಗತ್ಯವಾದ ಪೋಷಕಾಂಶವಾದ ಅಯೋಡಿನ್ ಅಂಶದ ಕೊರತೆಯಾಗಿದೆ. ಇದು ಗಾಯಿಟರ್‌ನಂತಹ ಚಯಾಪಚಯ ಸಮಸ್ಯೆಗಳಿಗೆ ಕಾರಣವಾಗಬಹುದು. ಸಮಸ್ಯೆ ಬಗೆಹರಿಸಲು ಸರ್ಕಾರ ಉಪ್ಪಿನೊಂದಿಗೆ ಅಯೋಡಿನ್ ಅಂಶವನ್ನು ಬೆರೆಸಿ ಸಾರ್ವಜನಿಕರಿಗೆ ಸಿಗುವಂತೆ ಮಾಡಲಾಗಿದೆಯಾಗಿದ್ದರೂ ಸಹ ಸಮುದಾಯದಲ್ಲಿ ನಮ್ಮ ತಾಯಂದಿರು ಉಪ್ಪನ್ನು ಹೇಗೆ ಬಳಸಬೇಕು ಹೇಗೆ ಶೇಖರಿಸಿ ಇಡಬೇಕು ಎನ್ನುವ ಅಭ್ಯಾಸಗಳಲ್ಲಿ ಬದಲಾವಣೆ ಆಗಬೇಕಿದೆ. ಅಂಗಡಿಯಿಂದ ಅಯೋಡಿನ್‌ಯುಕ್ತ ಉಪ್ಪನೇ ತಂದರು ಸಹ ಗಾಳಿಯಲ್ಲಿ ತೆರೆದಿಟ್ಟರೆ ಅಯೋಡಿನ್ ಅಂಶ ಆವಿಯಲ್ಲಿ ಹೊರಟು ಹೋಗುತ್ತದೆ. ಹಾಗಾಗಿ ಡಬ್ಬಿಯಲ್ಲಿ ತುಂಬಿ ಬಿಗಿಯಾಗಿ ಮುಚ್ಚಳವನ್ನು ಮುಚ್ಚಿ ಉಪ್ಪನ್ನು ಶೇಖರಿಸಿಕೊಂಡಿರಬೇಕು. ಅಡಿಗೆ ಮಾಡುವಾಗ ಸಾರು ಕುದಿಯುವಾಗ ಉಪ್ಪನ್ನು ಹಾಕಬಾರದು ಒಗ್ಗರಣೆಯನ್ನು ಕೊಟ್ಟು ಸ್ಟವ್ ಆಫ್ ಮಾಡಿ ನಂತರ ಉಪ್ಪನ್ನ ಹಾಕಿ ಪಾತ್ರೆಯನ್ನು ಮುಚ್ಚಿಡಬೇಕು ಹೀಗೆ ಮಾಡುವುದರಿಂದ ಶಾಖದಿಂದ ಅಯೋಡಿನ್ ಅಂಶ ಆವಿಯಾಗುವುದನ್ನು ತಡೆಗಟ್ಟಿ ದೇಹಕ್ಕೆ ಅಗತ್ಯವಿರುವ ಐಡಿನ ಅಂಶ ಸೇವಿಸಬಹುದಾಗಿದೆ. ಅಲ್ಲದೆ ಉಪ್ಪನ್ನು ಖರೀದಿಸುವಾಗ ಉಪ್ಪಿನ ಪಟ್ಟಣದ ಮೇಲೆ ಸೂರ್ಯ ಮಾರ್ಕ್ ಇರುವುದನ್ನ ಗಮನಿಸಿ ಖರೀದಿಸಬೇಕು. ದಿನನಿತ್ಯದ ಆಹಾರದಲ್ಲಿ ಅಯೋಡಿನ್ ಯುಕ್ತ ಉಪ್ಪನ್ನೇ ಬಳಸಿರಿ ಅಯೋಡಿನ್ ಕೊರತೆಯ ನ್ಯೂನ್ಯತೆಗಳನ್ನ ತಡೆಗಟ್ಟಿರಿ ಎಂದರು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಉಪ್ಪಿನ ಮಾದರಿಯನ್ನು ಪರೀಕ್ಷಿಸುವ ವಿಧಾನವನ್ನು ಪ್ರಾತ್ಯಕ್ಷಿಕೆ ನೀಡಿ ಉಪ್ಪಿನಲ್ಲಿ ಇರುವ ಅಯೋಡಿನ್ ಅಂಶವನ್ನು ಹೇಗೆ ಖಚಿತಪಡಿಸಿಕೊಳ್ಳಬೇಕು ಎಂಬುದನ್ನು ತಿಳಿಸಿದರು. ಬಸವೇಶ್ವರ ಪ್ರೌಢಶಾಲೆಯ ಮುಖ್ಯ ಶಿಕ್ಷಕ ಚಂದ್ರಶೇಖರ್ ಗೌಡ ಮಾತನಾಡಿದರು. ಕಾರ್ಯಕ್ರಮದಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕ ಷಡಕ್ಷರಯ್ಯ, ನಿವೃತ್ತ ಮುಖ್ಯ ಶಿಕ್ಷಕ ಶಿವಕುಮಾರ್, ಸಮುದಾಯ ಆರೋಗ್ಯ ಅಧಿಕಾರಿ ಕೃಷ್ಣಮೂರ್ತಿ, ಆರೋಗ್ಯ ನಿರೀಕ್ಷಣಾಧಿಕಾರಿ ರಂಗಾರೆಡ್ಡಿ, ಸಹ ಶಿಕ್ಷಕರು, ಆಶಾ ಕಾರ್ಯಕರ್ತೆಯರಾದ ಚಂದ್ರಮ್ಮ, ಮಂಜುಳಾ, ಶಾಲಾ ವಿದ್ಯಾರ್ಥಿಗಳು, ಅಡಿಗೆ ಸಹಾಯಕರು ಇದ್ದರು.

---

# ಸರ್ಕಾರದ ಯೋಜನೆಗಳನ್ನು ಸರಿಯಾದ ರೀತಿಯಲ್ಲಿ ಬಳಸಿಕೊಂಡು ಉದ್ಯೋಗಸ್ಥರಾಗಿ; ಬಸನಗೌಡ

» **ದಾವಣಗೆರೆ**

ಸ್ವಯಂ ಉದ್ಯೋಗ ಕೈಗೊಳ್ಳಲು ಸರ್ಕಾರದಿಂದ ಹಲವಾರು ಯೋಜನೆಗಳಿದ್ದು, ಅವುಗಳನ್ನು ಸರಿಯಾದ ರೀತಿಯಲ್ಲಿ ಬಳಸಿಕೊಂಡು ಉದ್ಯೋಗಸ್ಥರಾಗಬೇಕು ಎಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಬಸನಗೌಡ ತಿಳಿಸಿದರು.

ಬುಧವಾರ ನಗರದ ಕಿತ್ತೂರು ರಾಣಿ ಚೆನ್ನಮ್ಮ ಮತ್ತು ಸಂಗೊಳ್ಳಿ ರಾಯಣ್ಣ ಮಹಿಳಾ ಸಂಘದ, ಸಭಾಂಗಣದಲ್ಲಿ ಉದ್ಯಮಾಕಾಂಕ್ಷಿಗಳಿಗೆ ಹಮ್ಮಿಕೊಳ್ಳಲಾದ ಹತ್ತು ದಿನಗಳ ಉದ್ಯಮಶೀಲತಾಭಿವೃದ್ಧಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸ್ವಯಂ ಉದ್ಯೋಗ ಮಾಡಲು ಹಲವಾರು ಅವಕಾಶಗಳಿವೆ ಅವುಗಳಲ್ಲಿ ನಮಗೆ ಯಾವುದು ಸರಿಯಾದದು ಎಂದು ಆಯ್ಕೆಮಾಡಿಕೊಳ್ಳಬೇಕು. ಅಲ್ಲದೆ ಸ್ವಂತ ಉದ್ಯಮ ಮಾಡುವವರಿಗೆ ಸರ್ಕಾರದಿಂದ ಪಿ.ಎಂ. ಸ್ವನಿಧಿ ಯೋಜನೆ, ಪಿ.ಎಂ.ವಿಶ್ವಕರ್ಮ ಯೋಜನೆ ಇನ್ನೂ ಅನೇಕ ಯೋಜನೆಗಳಿವೆ ಅವುಗಳನ್ನು ಸರಿಯಾದ ರೀತಿಯಲ್ಲಿ ಬಳಸಿಕೊಳ್ಳಬೇಕು ಮತ್ತು ಹತ್ತು ದಿನಗಳ ಉದ್ಯಮಶೀಲತಾಭಿವೃದ್ಧಿ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸುವ ಮೂಲಕ ಸ್ವಂತ ಉದ್ಯೋಗವನ್ನು ಪ್ರಾರಂಭಿಸಬೇಕು. ಬೇರೆಯವರಿಗೂ ಕೂಡಾ ಉದ್ಯೋಗವನ್ನು ಕೊಡುವಂತವರಾಗಬೇಕು ಆಗ ಮಾತ್ರ ನಿರುದ್ಯೋಗ ಸಮಸ್ಯೆಯನ್ನು ಹೋಗಲಾಡಿಸಲು ಸಾಧ್ಯ ಎಂದರು.

ಇ-ಕಾರ್ಟ್ ಸರ್ವಿಸ್, ವಿಸ್ ಮಾಸ್ಟರ್ ಆರ್. ಮಧುಶ್ರೀ ಮಾತನಾಡಿ ನಾವು ಯಾವುದಕ್ಕೂ ಸೀಮಿತವಾಗಿರದೆ ನಮ್ಮಲ್ಲಿರುವ ಕೌಶಲ್ಯವನ್ನು ಉಪಯೋಗಿಸಿಕೊಂಡು ಸ್ವಯಂ ಉದ್ಯೋಗ ಮಾಡಿದಲ್ಲಿ ಯಶಸ್ಸು ಖಂಡಿತ ಸಿಗುತ್ತದೆ. ಹಾಗಾಗಿ ಈ ತರಬೇತಿಯ ಸದುಪಯೋಗ



ಪಡೆದುಕೊಂಡು ಯಶಸ್ವಿ ಉದ್ಯಮಿಗಳಾಗಬೇಕು. ಇ-ಕಾರ್ಟ್ ಸರ್ವೀಸ್ ದಾವಣಗೆರೆಯ ಮೊದಲ ಹಾಗೂ ಏಕೈಕ ಮಹಿಳಾ ವಿಶ್ ಮಾಸ್ಟರ್ ತಾನಾಗಿರುವುದಕ್ಕೆ ಬಹಳ ಹೆಮ್ಮೆಯಿದೆ ಎಂದರು. ಲೀಡ್ ಬ್ಯಾಂಕ್, ಜಿಲ್ಲಾ ವಿಭಾಗೀಯ ಮಾರ್ಗದರ್ಶಿ ವ್ಯವಸ್ಥಾಪಕ ಪ್ರಕಾಶ್ ಮಾತನಾಡಿ ಯಾವುದೇ ಸ್ವಯಂ ಉದ್ಯೋಗ ಅಥವಾ ಉದ್ಯಮವನ್ನು ಮಾಡಬೇಕಾದರೆ ಯೋಜನಾ ವರದಿ ಅತ್ಯಂತ ಅವಶ್ಯಕವಾಗಿರುತ್ತದೆ ಈ ಒಂದು ಯೋಜನಾ ವರದಿಯನ್ನು ಹೇಗೆ ಮಾಡಬಹುದೆಂದು ಸಂಕ್ಷಿಪ್ತವಾಗಿ ವಿವಸಿದರು ಮತ್ತು ಬ್ಯಾಂಕ್‌ಗಳಿಂದ ಸಿಗುವಂತಹ ಯೋಜನೆಗಳನ್ನು ಬಳಸಿಕೊಂಡು ನೀವು ಸ್ವಯಂ ಉದ್ಯೋಗಿಗಳಾಗುವುದಲ್ಲದೆ ನಾಲ್ಕೈದು ಜನರಿಗೆ ಉದ್ಯೋಗ ನೀಡಬಹುದು ಎಂದರು.

ಕಾರ್ಯಕ್ರಮದಲ್ಲಿ ಸಿಡಾಕ್ ಸಂಸ್ಥೆಯ ಜಂಟಿ ನಿರ್ದೇಶಕ ಆರ್.ಪಿ. ಪಾಟೀಲ್ ಕಿತ್ತೂರು ರಾಣಿ ಚೆನ್ನಮ್ಮ ಮತ್ತು ಸಂಗೊಳ್ಳಿರಾಯಣ್ಣ ಮಹಿಳಾ ಸಂಘದ ಅಧ್ಯಕ್ಷೆ ಶಿಲ್ಪಾ, ಸಿಡಾಕ್ ಸಂಸ್ಥೆಯ ತರಬೇತುದಾರರಾದ ವಿನಯ ಜಿ.ಕೆ, ಬಸವರಾಜ ಜಿ.ಬಿ, ಜಿಲ್ಲಾ ಕೌಶಲ್ಯ ಮಿಶನ್ ಸಹಾಯಕ ನಿರ್ದೇಶಕ ಡಾ. ಸಿದ್ದೇಶ್, ಮಿಷನ್ ಮ್ಯಾನೇಜರ್ ಡಾ.ವಿ.ಟಿ. ಬಸವರಾಜ್, ಮೇಲ್ವಿಚಾರಕ ಹರೀಶ್ ಉಪಸ್ಥಿತರಿದ್ದರು.

---

## ರೌಡಿಗಳಿಗೆ ಕಡಿವಾಣ, ಸೈಬರ್ ಅಪರಾಧ ತಡೆಗೆ ಕ್ರಮ ಕೈಗೊಳ್ಳಿ



» **ಮೊದಲ ಪುಟದಿಂದ**

ಎಲ್ಲಿಯೋ ನಡೆದ ಘಟನೆಯನ್ನು ತಿರುಚಿ ಶಾಂತಿ ಕದಡುವಂತೆ ಮಾಡುತ್ತಾರೆ. ಅಲ್ಲದೇ, ಡೀಪ್‌ಫೇಕ್ ಎಂಬ ತಂತ್ರಜ್ಞಾನ ಬಳಸಿಕೊಂಡು ಮಹಿಳೆಯರ ಮಾನ ಕಳೆಯುವ ಪ್ರಕರಣಗಳು ನಡೆಯುತ್ತಿರುವ ವರದಿಯಾಗುತ್ತಿವೆ. ಇಂತಹ ಪ್ರಕರಣಗ ಳನ್ನು ನಿರ್ಲಕ್ಷಿಸುವುದು ಬೇಡ. ಈ ರೀತಿಯ ದೂರುಗಳು ಬಂದಾಗ ಕೂಡಲೇ ಎಫ್‌ಐಆರ್ ದಾಖಲಿಸಿ, ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದರು.ರಾಜ್ಯದ ಪ್ರಮುಖ ನಗರಗಳಲ್ಲಿ ಸೈಬರ್ ಕ್ರೈಂ ಚಟುವಟಿಕೆ ಹೆಚ್ಚಾಗುತ್ತಿವೆ. ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗಳು ತಂತ್ರಜ್ಞಾನವನ್ನು ಬಳಸಿಕೊಂಡು ಮಟ್ಟ ಹಾಕಬೇಕು. ತಾಂತ್ರಿಕ ಪದವಿಧರ ಸಿಬ್ಬಂದಿಯನ್ನು ಗುರುತಿಸಿ ಜವಾಬ್ದಾರಿ ನೀಡಬೇಕು. ಸೈಬರ್ ಕ್ರೈಂ ಬಗ್ಗೆ ಸೋಷಿಯಲ್ ಮೀಡಿಯಾದಲ್ಲಿ ಜನರಿಗೆ ಅರಿವು ಮತ್ತು ಜಾಗೃತಿ ಮೂಡಿಸಬೇಕು ಎಂದು ಸೂಚನೆ ನೀಡಿದರು.

ಹೆಚ್ಚು ಅಪಘಾತಗಳು ಸಂಭವಿಸುವ (ಬ್ಲಾಕ್ ಸ್ಪಾಟ್) ಸ್ಥಳಗಳನ್ನು ಗುರುತಿಸಿ, ಅಪಘಾತಕ್ಕೆ ಕಾರಣಗಳನ್ನು ಪತ್ತೆಹಚ್ಚಬೇಕು. ರಸ್ತೆಗಳಲ್ಲಿ ಸೂಚನಾಫಲಕಗಳನ್ನು ಕಡ್ಡಾಯವಾಗಿ ಅಳವಡಿಸಬೇಕು. ಅಗತ್ಯ ಸ್ಥಳಗಳಲ್ಲಿ ಸಿಸಿ ಕ್ಯಾಮರಾ ಅಳವಡಿಸಲು ಮುಂದಾಗಬೇಕು. ಹೈವೆ ಪ್ಯಾಟ್ರೋಲಿಂಗ್ ಅಚ್ಚುಕಟ್ಟಾಗಿ ನಡೆಸಬೇಕು. ಪ್ರತಿ ಜಿಲ್ಲೆಗೆ ಇಬ್ಬರು ಹೆಚ್ಚುವರಿ ಪೊಲೀಸ್ ಅಧೀಕ್ಷಕರನ್ನು ನಿಯೋಜಿಸಲಾಗುತ್ತಿದೆ. ಶಾಂತಿ ಸುವಸ್ಥೆ ಕಾಪಾಡಲು ಒಬ್ಬರು, ಅಪರಾಧ ವಿಭಾಗಕ್ಕೆ ಮೊತ್ತಬ್ಬರು ಎಎಸ್‌ಪಿಯನ್ನು ನಿಯೋಜಿಸುವ ನಿಟ್ಟಿನಲ್ಲಿ ಸರ್ಕಾರ ಕ್ರಮ ಕೈಗೊಂಡಿದೆ ಎಂದರು. ಸಭೆಯಲ್ಲಿ ಯೋಜನೆ ಮತ್ತು ಸಾಂಖ್ಯಿಕ ಸಚಿವರು, ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್, ಡಿಐಜಿ ತ್ಯಾಗರಾಜನ್, ಜಿಲ್ಲಾಧಿಕಾರಿ ದಿವ್ಯ ಪ್ರಭು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದ್ರ ಕುಮಾರ್ ಮೀನಾ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ಡಿವೈಎಸ್‌ಪಿ ಅನಿಲ್‌ಕುಮಾರ್, ಗಣೇಶ್ ಸೇರಿದಂತೆ ಪೊಲೀಸ್ ಇಲಾಖೆಯ ವಿವಿಧ ಅಧಿಕಾರಿಗಳು ಇದ್ದರು.

---

**ಪ್ರಮುಖ ಸುದ್ದಿ**

# ದೇಶದ ಪ್ರಗತಿಗೆ ಸಹಕಾರಿಕ್ಷೇತ್ರದಿಂದ ಅಪಾರ ಕೊಡುಗೆ

» **ಹಿರಿಯೂರು**

ಈ ಸಹಕಾರಿ ಚಳುವಳಿಗೆ ಸುಮಾರು 120 ವರ್ಷಗಳ ಇತಿಹಾಸವಿದ್ದು, ಈ ಸಹಕಾರಿ ಕ್ಷೇತ್ರ ದೇಶದ ಆರ್ಥಿಕ ಪ್ರಗತಿಗೆ ಸಾಕಷ್ಟು ಕೊಡುಗೆ ನೀಡಿದೆ, ಈ ದೇಶದಲ್ಲಿ ಸುಮಾರು 40 ಸಾವಿರಕ್ಕೂ ಹೆಚ್ಚು ಸಹಕಾರ ಸಂಘಗಳು ಕೆಲಸ ನಿರ್ವಹಿಸುತ್ತಿದ್ದು, ಸುಮಾರು 60-70 ಸಾವಿರ ಕೋಟಿ ರೂಗಳ ಠೇವಣಿ ಹೊಂದಿದೆ, ಅಲ್ಲದೆ ಈ ಸಹಕಾರಿ ಸಂಘಗಳ ಮೂಲಕ ಸಾವಿರಾರು ಜನರಿಗೆ ಉದ್ಯೋಗ ಅವಕಾಶಗಳು ಸೇರಿದಂತೆ ಬಡಜನರಿಗೆ ಆರ್ಥಿಕ ಸಹಾಯ ನೀಡುವ ಮೂಲಕ ನಮ್ಮ ದೇಶ ಆರ್ಥಿಕ ಸಬಲತೆ ಗಳಿಸಲು ಸಾಧ್ಯವಾಗಿದೆ ಎಂಬುದಾಗಿ ಕೆಎಂ.ಎಫ್ ಹಾಗೂ ಡಿಸಿಸಿ ನಿರ್ದೇಶಕರು, ಸಹಕಾರರತ್ನ ಪ್ರಶಸ್ತಿ ಪುರಸ್ಕೃತ ವೀರಭದ್ರಬಾಬು ಹೇಳಿದರು.

ನಗರದ ಗುರುಭವನದಲ್ಲಿ ರಾಜ್ಯ ಸಹಕಾರಿ ಮಹಾಮಂಡಳಿ ಬೆಂಗಳೂರು, ಜಿಲ್ಲಾ ಸಹಕಾರ ಯೂನಿಯನ್ ಚಿತ್ರದುರ್ಗ, ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ಚಿತ್ರದುರ್ಗ, ತಾಲ್ಲೂಕು ವ್ಯವಸಾಯ ಉತ್ಪನ್ನಗಳ ಮಾರಾಟ ಸಹಕಾರಸಂಘ, ತಾಲ್ಲೂಕಿನ ಎಲ್ಲಾ ಪತ್ತಿನ ಸಹಕಾರ ಸಂಘಗಳು, ತಾಲ್ಲೂಕಿನ ಹಾಲು ಉತ್ಪಾದಕರ ಸಹಕಾರ ಸಂಘಗಳು, ತಾಲ್ಲೂಕಿನ ಎಲ್ಲಾ ಪ್ರಾಥಮಿಕ ಕೃಷಿಪತ್ತಿನ ಸಹಕಾರ ಸಂಘಗಳು ಇವರುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ 70ನೇ ಸಹಕಾರ



ಸಪ್ತಾಹ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿವರ್ಷ ನವಂಬರ್ 14 ರಿಂದ 20ರವರೆಗೆ ರಾಜ್ಯಾದ್ಯಂತ ಹಾಗೂ ರಾಷ್ಟ್ರ□ದ್ಯಂತ ಈ ಸಹಕಾರಿ ಸಪ್ತಾಹವನ್ನು ಆಚರಿಸಲಾಗುತ್ತಿದ್ದು, ಈ ಸಂದರ್ಭದಲ್ಲಿ ಸಹಕಾರ ಚಳುವಳಿ ನಡೆದು ಬಂದ ದಾರಿ ಹಾಗೂ ಈ ದಾರಿಯಲ್ಲಿನ ಸಾಧನೆ ಹಾಗೂ ವೈಫಲ್ಯಗಳನ್ನು ಕುರಿತು ಚಿಂತನ-ಮಂಥನ ನಡೆಸಲಾಗುತ್ತದೆ ಎಂಬುದಾಗಿ ಹೇಳಿದರು. ಜಿಲ್ಲಾ ಸಹಕಾರಿ ಯೂನಿಯನ್ ನಿರ್ದೇಶಕ ಪ್ರತಾಪಸಿಂಹ ಮಾತನಾಡಿ, ಸಹಕಾರಿ ಕ್ಷೇತ್ರ ವಿಶಾಲವಾದ ವ್ಯಾಪ್ತಿಪ್ರದೇಶವನ್ನು ಹೊಂದಿದ್ದು, ಈ ಗ್ರಾಮೀಣ ಕೃಷಿ ಪತ್ತಿನ ಸಹಕಾರ ಸಂಘಗಳ ಮೂಲಕ ಕೃಷಿಕರಿಗೆ ಎಲ್ಲಾ ರೀತಿಯ ಸಾಲಸೌಲಭ್ಯ ದೊರಕಲಿದ್ದು, ಪಶುಸಂಗೋಪನೆಗೆ ಸಹಾಯಧನ, ಹಾಲು ಉತ್ಪಾದಕರಿಗೆ ಪ್ರೋತ್ಸಾಹಧನ, ರೈತರಿಗೆ ರಸಗೊಬ್ಬರಗಳ ರಿಯಾಯಿತಿ ಸೇರಿದಂತೆ ಎಲ್ಲಾರೀತಿಯ ಸೌಲಭ್ಯಗಳು ದೊರಕುತ್ತಿವೆ ಎಂಬುದಾಗಿ ಹೇಳಿದರು.

ಆರಂಭದಲ್ಲಿ ಪ್ರಾಸ್ತಾವಿಕನುಡಿಗಳನ್ನಾಡಿದ ವಾಣಿವಿಲಾಸ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷರಾದ ಆಲೂರು ಹನುಮಂತರಾಯಪ್ಪ ಮಾತನಾಡಿ, ನಮ್ಮ ಚಿತ್ರದುರ್ಗ ಜಿಲ್ಲೆ ಸಹ ರಾಜ್ಯದ ಸಹಕಾರಿ ಕ್ಷೇತ್ರಕ್ಕೆ ರಾಜ್ಯದ ಸಹಕಾರ ಸಚಿವರಾಗಿದ್ದ ದಿವಂಗತ ಬಿ.ಎಲ್.ಗೌಡ, ಕೆ.ಹೆಚ್. ರಂಗನಾಥ್, ಹೆಚ್.ಏಕಾಂತಯ್ಯ, ಹಾಗೂ ದಿವಂಗತ ವಿ.ಮಸಿಯಪ್ಪ ಇಂತಹ ಮಹನೀಯರನ್ನು ಕೊಡುಗೆಯಾಗಿ ನೀಡಿದ್ದು, ಇವರೆಲ್ಲರ ಕನಸಿನಕೂಸು ಹಾಗೂ ಜಿಲ್ಲೆಯ ರೈತರ ಜೀವನಾಡಿಯಾಗಿದ್ದ ವಾಣಿವಿಲಾಸ ಸಕ್ಕರೆ ಕಾರ್ಖಾನೆಯನ್ನು ರಾಜ್ಯಸರ್ಕಾರ ಪುನರಾರಂಭಿಸಬೇಕು ಎಂಬುದಾಗಿ ಒತ್ತಾಯಿಸಿದರು.

ಇದೇ ಸಂದರ್ಭದಲ್ಲಿ ಹಿರಿಯ ಸಹಕಾರಿಗಳನ್ನು ಹಾಗೂ ಉತ್ತಮ ಸಹಕಾರ ಸಂಘಗಳ ಆಡಳಿತ ಮಂಡಳಿ ಮುಖ್ಯಸ್ಥರು ಹಾಗೂ ವ್ಯವಸ್ಥಾಪಕರು, ಕಾರ್ಯದರ್ಶಿಗಳನ್ನು ಶಾಲುಹೊದಿಸಿ ಸನ್ಮಾನಿಸಿ ಗೌರವಿಸಲಾಯಿತು.

ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳಿ ನಿರ್ದೇಶಕರು ಹಾಗೂ ಟಿಎಪಿಸಿಎಂಎಸ್ ಅಧ್ಯಕ್ಷರಾದ ಎಸ್.ಜೆ.ಹನುಮಂತರಾಯ ವಹಿಸಿದ್ದರು. ಕಾರ್ಯಕ್ರಮದಲ್ಲಿ ಡಿಸಿಸಿ ಬ್ಯಾಂಕ್ ನಿರ್ದೇಶಕರಾದ ಪಿ.ರಾಜು, ಸಹಕಾರರತ್ನ ಪುರಸ್ಕೃತರು ಹಾಗೂ ರಾಜ್ಯ ಸಹಕಾರ ಮಹಾಮಂಡಳಿ ನಿರ್ದೇಶಕರಾದ ರಾಮರೆಡ್ಡಿ, ಸಂಪನ್ಮೂಲ ವ್ಯಕ್ತಿ ಐ.ಎಂ.ಚಂದ್ರಶೇಖರಯ್ಯ, ಸಿಮುಲ್ ನಿರ್ದೇಶಕರಾದ ಯಶವಂತರಾಜ್, ಕೃಷಿಕ ಸಮಾಜದ ಅಧ್ಯ ಹೆಚ್.ಆರ್.ತಿಮ್ಮಯ್ಯ, ಕೆಂಪೇಗೌಡಪತ್ತಿನಸಹಕಾರಸಂಘದಅಧ್ಯಕ್ಷ ಕಂದಿಕೆರೆ ಜಗದೀಶ್, ಪಿಎಲ್.ಡಿ ಬ್ಯಾಂಕ್ ಅಧ್ಯಕ್ಷರಾದ ಕೀರ್ತಿ ಕುಮಾರಿ, ಪ್ರಭಾರ ಸಹಕಾರ ಸಂಘದ ಉಪನಿರ್ದೇಶಕರಾದ ಟಿ.ಮಧುಶ್ರೀನಿವಾಸ್, ಸಹಕಾರಿ ಸಂಘಗಳ ಲೆಕ್ಕಪರಿಶೋಧ ಉಪನಿರ್ದೇಶಕರಾದ ಕೆ.ಮಹೇಶ್ವರಪ್ಪ, ಸಹಕಾರಿ ಅಭಿವೃದ್ಧಿ ಅಧಿಕಾರಗಳಾದ ಕೆ.ಶಿವಮೂರ್ತಿ, ಜಿಲ್ಲಾ ಸಹಕಾರಿ ಯೂನಿಯನ್ ಸಿಇಓ ನಾಗರಾಜ್ ಪಾಟೀಲ್, ಡಿಸಿಸಿ ಬ್ಯಾಂಕ್ ವ್ಯವಸ್ಥಾಪಕರಾದ ಸತೀಶ್ ನಾಯ್ಕ, ಮೇಲ್ವಿಚಾರಕರುಗಳಾದ ಶಶಿಧರ್, ಹಾಗೂ ಶ್ರೀರಧರ್, ಟಿಎಪಿಸಿಎಂಎಸ್ ಕಾರ್ಯದರ್ಶಿ ಗುರುಸ್ವಾಮಿ, ತಾಲ್ಲೂಕು ಸಹಕಾರಿ ಸಂಘಗಳ ನೌಕರರ ಒಕ್ಕೂಟದ ಅಧ್ಯಕ್ಷ ಎಸ್.ಎಸ್.ರಂಗಪ್ಪ, ಉಪಾಧ್ಯಕ್ಷ ರಾಮಚಂದ್ರಯ್ಯ, ಕಾರ್ಯದರ್ಶಿ ಕೆ.ಎಸ್. ರಂಗಸ್ವಾಮಿ, ಖಜಾಂಚಿ ಎಂ.ಜಗದೀಶ್, ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

## ಫಾಸ್ಟ್ ನ್ಯೂಸ್

### ನೀರಾವರಿ ಮತ್ತು ಪಂಪ್‌ಸೆಟ್ಟುಗಳಿಗೆ ವಿದ್ಯುತ್ ವ್ಯತ್ಯಯ

» ದಾವಣಗೆರೆ

ಹಿರೇಮಲ್ಲನಹೊಳೆ ವಿ.ವಿ ಕೇಂದ್ರದಲ್ಲಿ ತ್ರೈಮಾಸಿಕ ಕಾಮಗಾರಿ ಹಮ್ಮಿಕೊಂಡಿರುವುದರಿಂದ ನ.18 ರಂದು ಬೆಳಿಗ್ಗ 10 ರಿಂದ ಸಂಜೆ 6 ಗಂಟೆಯವರೆಗೆ ಹಿರೇಮಲ್ಲನಹೊಳೆ ವಿ.ವಿ ಕೇಂದ್ರದ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಗ್ರಾಮಗಳ ಎನ್.ಜೆ.ವೈ ಮಾರ್ಗಗಳು ಮತ್ತು ನೀರಾವರಿ ಪಂಪ್‌ಸೆಟ್ಟು ಮಾರ್ಗಗಳಿಗೆ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ತಿಳಿಸಿದೆ.

### ಹೊಸ ನ್ಯಾಯಬೆಲೆ ಅಂಗಡಿ ತೆರೆಯಲು ಅರ್ಜಿ ಆಹ್ವಾನ

» ದಾವಣಗೆರೆ

ಜಿಲ್ಲೆಯ ಚನ್ನಗಿರಿ ತಾಲ್ಲೂಕಿನ ಹೊನ್ನನಾಯಕನಹಳ್ಳಿ, ಸಂತೆಬೆನ್ನೂರು–2 ಹೋಬಳಿ ಸಮೀಪದ ಚಿಕ್ಕುಡಿ, ಅಜ್ಜಿಹಳ್ಳಿ ಗ್ರಾಮಗಳಿಗೆ ಪಡಿತರ ಚೀಟಿದಾರರ ಹಿತದೃಷ್ಟಿಯಿಂದ ಮತ್ತು ಸಾರ್ವಜನಿಕ ವಿತರಣಾ ವ್ಯವಸ್ಥೆ ಪರಿಣಾಮಕಾರಿಗೊಳಿಸಲು ಹೊಸ ನ್ಯಾಯಬೆಲೆ ಅಂಗಡಿ ಮಂಜೂರಾತಿಗಾಗಿ ನಿಗಧಿತ ನಮೂನೆಯಲ್ಲಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಹೊನ್ನನಾಯಕನಹಳ್ಳಿ ಗ್ರಾಮಕ್ಕೆ ಹೊಸ ನ್ಯಾಯಬೆಲೆ ಅಂಗಡಿಗೆ 49 ಅಂತ್ಯೋದಯ, 180 ಬಿಪಿಎಲ್ ಮತ್ತು 11 ಎಪಿಎಲ್ ಒಳಗೊಂಡಂತೆ ಒಟ್ಟು 240 ಪಡಿತರ ಚೀಟಿಗಳನ್ನು ನಿಯೋಜಿಸಲಾಗುವುದು. ಸಂತೆಬೆನ್ನೂರು–2 ಹೋಬಳಿ ಸಮೀಪದ ಚಿಕ್ಕುಡಿ, ಗ್ರಾಮಕ್ಕೆ 54 ಅಂತ್ಯೋದಯ, 246 ಬಿಪಿಎಲ್ ಮತ್ತು 5 ಎಪಿಎಲ್ ಒಳಗೊಂಡಂತೆ ಒಟ್ಟು 305 ಪಡಿತರ ಚೀಟಿಗಳನ್ನು ನಿಯೋಜಿಸಲಾಗುವುದು. ಅಜ್ಜಿಹಳ್ಳಿ ಗ್ರಾಮಕ್ಕೆ 48 ಅಂತ್ಯೋದಯ, 308 ಬಿಪಿಎಲ್ ಮತ್ತು 11 ಎಪಿಎಲ್ ಒಳಗೊಂಡಂತೆ ಒಟ್ಟು 367 ಪಡಿತರ ಚೀಟಿಗಳನ್ನು ನಿಯೋಜಿಸಲಾಗುವುದು. ಆಸಕ್ತ ಮತ್ತು ಅರ್ಹ ಅಭ್ಯರ್ಥಿಗಳು ಪ್ರಕಟಣೆ ಹೊರಡಿಸಿದ 30 ದಿನಗಳೊಳಗಾಗಿ ಉಪನಿರ್ದೇಶಕರು, ಜಿಲ್ಲಾ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ (ಜಿಲ್ಲಾಡಳಿತ ಭವನದ ಕೊಠಡಿ ನಂ. 4) ಇವರಿಂದ ಅರ್ಜಿ ನಮೂನೆ ಪಡೆದು, ಅಗತ್ಯ ದಾಖಲೆಗಳೊಂದಿಗೆ ಸಲ್ಲಿಸಬೇಕು. ಅರ್ಜಿ ನಮೂನೆಯನ್ನು ಚನ್ನಗಿರಿ ತಾಲ್ಲೂಕು ಕಚೇರಿಯಲ್ಲಿ ಸಹ ಪಡೆದುಕೊಳ್ಳಬಹುದೆಂದು ಜಿಲ್ಲಾ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಉಪ ನಿರ್ದೇಶಕರು ತಿಳಿಸಿದ್ದಾರೆ.

### ಶ್ರೀ ಸೋಮೇಶ್ವರ ಚದುರಂಗಸಿರಿ' ಪ್ರಶಸ್ತಿಗಾಗಿ ಚದುರಂಗಸ್ಪರ್ಧೆ

» ದಾವಣಗೆರೆ

ನಗರದ ಪ್ರತಿಷ್ಠಿತ ವಿದ್ಯಾಸಂಸ್ಥೆಗಳಲ್ಲಿ ಒಂದಾದ ಶ್ರೀಸೋಮೇಶ್ವರ ವಿದ್ಯಾಲಯದಲ್ಲಿ ಕನ್ನಡ ರಾಜ್ಯೋತ್ಸವ ಹಾಗೂ ಮಕ್ಕಳ ದಿನಾಚರಣೆ ಅಂಗವಾಗಿ ದಿನಾಂಕ:18/11/2023 ರ ಶನಿವಾರ ಬೆಳಗ್ಗೆ 9.30 ಕ್ಕೆ ಜಿಲ್ಲಾ ಮಟ್ಟದ ಅಂತರ ಶಾಲಾಮಟ್ಟದ ಚದುರಂಗ ಸ್ಪರ್ಧೆಯನ್ನು ಏರ್ಪಡಿಸಲಾಗಿದ್ದು, ಆಸಕ್ತ ಶಾಲೆ ವಿದ್ಯಾರ್ಥಿಗಳು ಈ ಸ್ಪರ್ಧೆಯಲ್ಲಿ ಭಾಗವಹಿಸಬಹುದು, ಸ್ಪರ್ಧೆಯಲ್ಲಿ ವಿಜೇತರಾದರಾದವರಿಗೆ ಪ್ರಥಮ ಬಹುಮಾನವಾಗಿ 'ಸೋಮೇಶ್ವರ ಚದುರಂಗಸಿರಿ' ಪ್ರಶಸ್ತಿ ಹಾಗೂ 5 ಸಾವಿರ ರೂಪಾಯಿ ನೀಡಲಾಗುವುದು, ದ್ವಿತೀಯ ಬಹುಮಾನ ಪ್ರಶಸ್ತಿ ಪತ್ರದೊಂದಿಗೆ 3 ಸಾವಿರ ರೂ ನೀಡಿ ಗೌರವಿಸಲಾಗುವುದೆಂದು ಶಾಲೆಯ ಗೌರವ ಕಾರ್ಯದರ್ಶಿಗಳಾದ ಕೆ.ಎಂ ಸುರೇಶ್ ರವರು ತಿಳಿಸಿದ್ದಾರೆ.

### ನೋಂದಾಯಿತ ಕಲಾ ಸಂಘ-ಸಂಸ್ಥೆಗಳಿಂದ ಸಹಾಯಧನಕ್ಕೆ ಅರ್ಜಿ

» ದಾವಣಗೆರೆ

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಪ್ರಸಕ್ತ ಸಾಲಿಗೆ ಸಾಮಾನ್ಯ ವಿಶೇಷ ಘಟಕ ಮತ್ತು ಗಿರಿಜನ ಉಪಯೋಜನೆಯಡಿ ನೋಂದಾಯಿತ ಕಲಾ ಸಂಘ–ಸಂಸ್ಥೆಗಳಿಗೆ ಪ್ರೋತ್ಸಾಹ ರೂಪದಲ್ಲಿ ಸಹಾಯಧನ ನೀಡಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಕನ್ನಡ ಭಾಷೆ, ಸಾಹಿತ್ಯ, ಸಂಗೀತ, ನೃತ್ಯ, ಜಾನಪದ, ನಾಟಕ, ಯಕ್ಷಗಾನ, ಚಿತ್ರಕಲೆ, ಶಿಲ್ಪಕಲೆ ಮುಂತಾದ ಸೃಜನಶೀಲ ಕಲಾ ಪ್ರಕಾರಗಳನ್ನು ಉಳಿಸಿ ಬೆಳೆಸುತ್ತಿರುವ ನೋಂದಾಯಿತ ಕಲಾ ಸಂಘ–ಸಂಸ್ಥೆಗಳು ಡಿಸೆಂಬರ್.13 ರೊಳಗಾಗಿ ವೆಬ್‌ಸೈಟ್ www.sevasindhu.karnataka.gov.in ಮೂಲಕ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಸೇವಾಸಿಂಧು ವ್ಯವಸ್ಥಾಪಕರರ ದೂ.ಸಂ. 08022279954, 9986837037, 8792662814, 8792662816 ಅಥವಾ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರ ಕಚೇರಿ, ದೂ.ಸಂ.08192 234849 ಅಥವಾ ವೆಬ್‌ಸೈಟ್ www.kannadasiri.karnataka.gov.in ಸಂಪರ್ಕಿಸಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ ತಿಳಿಸಿದ್ದಾರೆ.

# ಎಸ್.ಸಿ.ಪಿ, ಟಿ.ಎಸ್.ಪಿ ಪ್ರಗತಿ ಪರಿಶೀಲನಾ ಸಭೆ, ಕಾಲಮಿತಿಯಲ್ಲಿ ಅನುದಾನ ವೆಚ್ಚ ಮಾಡಲು ಸೂಚನೆ

» ದಾವಣಗೆರೆ

ಪರಿಶಿಷ್ಟ ಜಾತಿ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಯಡಿ ರೂಪಿಸುವ ಯೋಜನೆಗೆ ಬಿಡುಗಡೆಯಾಗುವ ಅನುದಾನವನ್ನು ಕಾಲಮಿತಿಯಲ್ಲಿ ವೆಚ್ಚ ಮಾಡಬೇಕೆಂದು ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ ಸೂಚನೆ ನೀಡಿದರು.

ಅವರು ನವಂಬರ್ 16 ರಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಹಾಗೂ ಅವರ ಅಧ್ಯಕ್ಷತೆಯಲ್ಲಿ ನಡೆದ ಎಸ್.ಸಿ.ಪಿ, ಟಿ.ಎಸ್.ಪಿ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.



ಮಾರ್ಚ್ ಮಾಫಿಯಾಗೆ ಆಕ್ಷೇಪ. ಕೆಲವು ಇಲಾಖೆಯವರು ವರ್ಷವಿಡಿ ಅನುದಾನ ಖರ್ಚು ಮಾಡದಿದ್ದರೂ ಮಾರ್ಚ್ ನಲ್ಲಿ ಶೇ 100 ರಷ್ಟು ಸಾಧನೆ ಮಾಡುತ್ತಾರೆ. ಆದರೆ ಇದಕ್ಕೆ ಅವಕಾಶ ನೀಡದೆ, ಕೊನೆಯಲ್ಲಿ ಖರ್ಚು ಮಾಡುವ ಇಲಾಖೆ ಅಧಿಕಾರಿಗಳ ಮೇಲೆ ತೀವ್ರ ನಿಗಾ ವಹಿಸಲಾಗುತ್ತದೆ.ನೈಜ ಕಾರಣಗಳಿಲ್ಲದಿದ್ದಲ್ಲಿ ಶಿಸ್ತುಕ್ರಮ ಕೈಗೊಳ್ಳಲಾಗುತ್ತದೆ ಎಂದರು. ಸಕಾಲದಲ್ಲಿ ವೆಚ್ಚ ಮಾಡಿ. ಈಗಾಗಲೇ ಎಲ್ಲಾ ಇಲಾಖೆಗಳ ಕ್ರಿಯಾ ಯೋಜನೆ ಅನುಮೋದನೆಯಾಗಿ ಅನುದಾನವನ್ನು ಬಿಡುಗಡೆ ಮಾಡಲಾಗಿದೆ. ವರ್ಷಾಂತ್ಯದಲ್ಲಿ ಚುನಾವಣೆ ಬರುವುದರಿಂದ ಟೆಂಡರ್ ಕರೆದು ಅನುಷ್ಠಾನ ಮಾಡಬೇಕು. ಬೆಸ್ಕಾಂ ಶೂನ್ಯ ಪ್ರಗತಿ, ಆರೋಗ್ಯ ಇಲಾಖೆ ಶೇ 87, ಆಯುಷ್ ಶೇ 35, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಶೇ 64, ಜಲಸಂಪನ್ಮೂಲ ಇಲಾಖೆ ಶೇ 46 ಸಾಧಿಸಲಾಗಿದೆ. ಸಣ್ಣ ನೀರಾವರಿ ಇಲಾಖೆಗೆ ರೂ.6 ಕೋಟಿ ಕ್ರಿಯಾ ಯೋಜನೆಗೆ ಅನುಮೋದನೆ ನೀಡಿದ್ದು ಅನುದಾನ ಬರಬೇಕಿದೆ ಎಂದಾಗ ನೀರಾವರಿ ಸೌಲಭ್ಯದ ಜೊತೆಗೆ ಅವರ ಜಮೀನುಗಳಿಗೆ ಅನುಕೂಲವಾಗುವಂತೆ ಸಣ್ಣ ಸಣ್ಣ ಕೆರೆ, ಚೆಕ್ ಡ್ಯಾಂ ನಿರ್ಮಾಣವನ್ನು ಜಲಸಂಪನ್ಮೂಲ ಇಲಾಖೆಯವರು ಮುಂದಾಗಬೇಕೆಂದರು. ನೀರಾವರಿ ಕೊನೆ ಭಾಗದ ಅನೇಕ ರೈತರು ನೀರು ತಲುಪುತ್ತಿಲ್ಲ ಎಂದು ಮನವಿ ಮಾಡಿದ್ದಾರೆ.

ಖಾತರಿಯಡಿ ಕಾಲುವೆ ಸ್ವಚ್ಛತೆ. ಜಿಲ್ಲೆಯಲ್ಲಿ ಉದ್ಯೋಗ ಖಾತರಿಯಡಿ ವಾರ್ಷಿಕ 35 ಲಕ್ಷ ಮಾನವ ದಿನಗಳ ಗುರಿ ಇದ್ದು ಇದನ್ನು ಇನ್ನೂ ಹೆಚ್ಚಿಸುವ ಮೂಲಕ ಕಾಲುವೆ ಸ್ವಚ್ಛ ಮಾಡಲು ಬಳಕೆ ಮಾಡಿಕೊಳ್ಳುವ ನಿಟ್ಟಿನಲ್ಲಿ ಕ್ರಿಯಾ ಯೋಜನೆ ಪರಿಷ್ಕರಿಸಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಜಿ.ಪಂ. ಯೋಜನಾಧಿಕಾರಿಗಳಿಗೆ ತಿಳಿಸಿದರು.

ಜಿಲ್ಲೆಯಲ್ಲಿ ಎಲ್ಲಾ ಇಲಾಖೆ ಎಸ್ .ಸಿ.ಪಿ.ಯಿಂದ ಶೇ 72 ಮತ್ತು ಟಿ.ಎಸ್.ಪಿ.ಯಲ್ಲಿ ಶೇಕಡ 77 ಸೇರಿದಂತೆ ಜಿಲ್ಲೆಯಲ್ಲಿ ಸರಾಸರಿ ಶೇಕಡ 74.50 ರಷ್ಟು ಪ್ರಗತಿ ದಾಖಲಾಗಿದೆ. ಇದನ್ನು ಬರುವ ಡಿಸೆಂಬರ್ ವೇಳೆಗೆ ಶೇಕಡ 80 ಕ್ಕಿಂತಲೂ ಹೆಚ್ಚು ಸಾಧನೆ ಆಗಿರಬೇಕು ಎಂದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಮಲ್ಲನಾಯಕ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ನಾಗರಾಜ್ ಕೆ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ನ.18, 19 ರಂದು ಸ್ಪರ್ಧಾತ್ಮಕ ಪರೀಕ್ಷೆ ಕೆ.ಇ.ಎ ಮಾರ್ಗಸೂಚಿ ಪಾಲಿಸಲು ಸೂಚನೆ: ಲೋಕೇಶ್

» ದಾವಣಗೆರೆ

ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ನವೆಂಬರ್ 18 ಮತ್ತು 19 ರಂದು ನಗರದ 18 ಪರೀಕ್ಷಾ ಕೇಂದ್ರಗಳಲ್ಲಿ ವಿವಿಧ ನಿಗಮ ಮಂಡಳಿಯಲ್ಲಿನ ಹುದ್ದೆಗಳ ನೇಮಕಾತಿಗೆ ಸ್ಪರ್ಧಾತ್ಮಕ ಪರೀಕ್ಷೆ ನಡೆಯಲಿದೆ. ಈ ವೇಳೆ ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಕೆ.ಇ.ಎ ಮಾರ್ಗಸೂಚಿಯನ್ನು ಅನುಸರಿಸುವ ಮೂಲಕ ಸುಗಮವಾಗಿ ಪರೀಕ್ಷೆಗಳನ್ನು ನಡೆಸಬೇಕು ಎಂದು ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್ ಸೂಚಿಸಿದರು.

ಶುಕ್ರವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಜರುಗಿದ ಸ್ಪರ್ಧಾತ್ಮಕ ಪರೀಕ್ಷಾ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನವೆಂಬರ್ 18ರಂದು ನಗರದ 3 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆಗಳು ನಡೆಯಲಿದೆ. ಬೆಳಿಗ್ಗೆ 10 ರಿಂದ 1 ರವರೆಗೆ ನಡೆಯುವ ಮೊದಲ ಅಧಿವೇಶನದಲ್ಲಿ 458 ಅಭ್ಯರ್ಥಿಗಳು ಹಾಗೂ ಮಧ್ಯಾಹ್ನ 2.30ರಿಂದ 4.30ರವರೆಗೆ ನಡೆಯಲಿರುವ ಎರಡನೇ ಅಧಿವೇಶನದಲ್ಲಿ 1329 ಪರೀಕ್ಷೆ ಬರೆಯಲಿದ್ದಾರೆ. ನವೆಂಬರ್ 19 ರಂದು ನಗರದ 18 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆಗಳು ನಡೆಯಲಿದ್ದು, ಬೆಳಿಗ್ಗೆ 10.30ರಿಂದ 1ರವರೆಗೆ ನಡೆಯುವ ಮೊದಲ ಅಧಿವೇಶನದಲ್ಲಿ 8000



ಅಭ್ಯರ್ಥಿಗಳು ಹಾಗೂ ಮಧ್ಯಾಹ್ನ 2.30ರಿಂದ 4.30ರವರೆಗೆ ನಡೆಯಲಿರುವ ಎರಡನೇ ಅಧಿವೇಶನದಲ್ಲಿ 6867 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ.

ಪರೀಕ್ಷೆಯಲ್ಲಿ ಭಾಗವಹಿಸಲಿರುವ ಎಲ್ಲಾ ಪರೀಕ್ಷಾರ್ಥಿಗಳುಪರೀಕ್ಷಾಕೇಂದ್ರದೊಳಗೆಸ್ಮಾರ್ಟ್ ವಾಚ್, ಮೊಬೈಲ್, ಕ್ಯಾಲ್ಕುಲೇಟರ್ ಸೇರಿದಂತೆ ಯಾವುದೇ ಎಲೆಕ್ಟ್ರಾನಿಕ್ ಉಪಕರಣಗಳನ್ನು ಪರೀಕ್ಷಾ ಕೇಂದ್ರದೊಳಗೆ ಕೊಂಡೊಯ್ಯುವುದನ್ನು ಕಡ್ಡಾಯವಾಗಿ ನಿಷೇಧಿಸಿದೆ.

ಪರೀಕ್ಷೆಗಳು ನಡೆಯುವ ದಿನಗಳಂದು ಪರೀಕ್ಷಾ ಕೇಂದ್ರದ 200ಮೀ. ವ್ಯಾಪ್ತಿಯಲ್ಲಿ ನಿಷೇಧಜ್ಞೆ ಜಾರಿಯಲ್ಲಿರುತ್ತದೆ. ಮತ್ತು ಸುತ್ತಮುತ್ತಲಿನ ಜೆರಾಕ್ಸ್ ಅಂಗಡಿಗಳನ್ನು ಮುಚ್ಚುವಂತೆ ಹಾಗೂ ಕೇಂದ್ರದ ಸುತ್ತಮುತ್ತಲ ಪ್ರದೇಶದಲ್ಲಿ ಈಗಾಗಲೇ ನಿಷೇದಾಜ್ಞೆ ಜಾರಿಗೊಳಿಸಲಾಗಿದೆ ಎಂದರು.

ಪರೀಕ್ಷಾ ಕೇಂದ್ರಗಳಿಗೆ ನಿಯೋಜಿಸಲಾದ ಅಧಿಕಾರಿಗಳು, ಮೇಲ್ವಿಚಾರಕರು ಪರೀಕ್ಷಾ ಕೇಂದ್ರಗಳಲ್ಲಿ ಒಂದು ಗಂಟೆ ಮುಂಚಿತವಾಗಿ ಹಾಜರಿರಬೇಕು. ಪ್ರಶ್ನೆಪತ್ರಿಕೆ ಮತ್ತು ಓಎಂಆರ್ ಶೀಟ್‌ಗಳನ್ನು ಸರಿಯಾದ ಸಮಯಕ್ಕೆ ಪರೀಕ್ಷಾರ್ಥಿಗಳಿಗೆ ವಿತರಿಸಬೇಕು. ಯಾವುದೇ ಕಾರಣಕ್ಕೂ ಪರೀಕ್ಷಾ ಸಮಯದಲ್ಲಿ ಮೊಬೈಲ್ ಬಳಸಬಾರದು ಎಂದು ತಿಳಿಸಿದರು.

# ಕನ್ನಡದ ಹೋರಾಟಕ್ಕೆ ಸದಾ ಸಿದ್ಧ: ಕೃಷ್ಣ ಮೂರ್ತಿ ಪೂಜಾರ್



» ಹಿರಿಯೂರು

ಕನ್ನಡ ಭಾಷೆ ನೆಲ ಜಲ ಹೋರಾಟಕ್ಕೆ ಸದಾ ಸಿದ್ಧ ಎಂದು ಕರ್ನಾಟಕ ರಕ್ಷಣಾ ವೇದಿಕೆ ಪ್ರವೀಣ್ ಶೆಟ್ರು ಬಣ ಹಿರಿಯೂರು ತಾಲ್ಲೂಕು ಅಧ್ಯಕ್ಷರಾದ ಕೃಷ್ಣ ಮೂರ್ತಿ ಪೂಜಾರ್ ಹೇಳಿದರು. ನಗರದ ಬೆಂಗಳೂರು ರಸ್ತೆಯಲ್ಲಿ ವೇದಿಕೆಯ ವತಿಯಿಂದ ಇಂದು ಶುಕ್ರವಾರ ಬೆಳಿಗ್ಗೆ ಏರ್ಪಡಿಸಿದ್ದ 68ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ನಮ್ಮ ಸಂಘಟನೆಯ ವತಿಯಿಂದ ಹಿಂದಿನಿಂದಲೂ ಕನ್ನಡ ಬಾಷೆ ನೆಲ ಜಲ ಹೋರಾಟ ನಡೆಸುತ್ತಾ ಬಂದಿದ್ದು ಮುಂದೆಯೂ ಸಹ ಹೋರಾಟ ಮುನ್ನಡೆಯುತ್ತದೆ ಎಂದು ಹೇಳಿದರು. ಕನ್ನಡ ಭುವನೇಶ್ವರಿ ಮಾತೆಗೆ ಪೂಜೆ ನೆರವೇರಿಸಿ ನಗರದ ಪ್ರಮುಖ ಬೀದಿಗಳಲ್ಲಿ ಭವ್ಯ ಮೆರವಣಿಗೆ ನಡೆಸಲಾಯಿತು ಕಾರ್ಯಕರ್ತರು ಆಟೋಗಳಲ್ಲಿ ಕಾರ್ ಗಳಲ್ಲಿ ಬಾವುಟಗಳನ್ನು ಹಾಕಿಕೊಂಡು ಮೆರವಣಿಗೆಯಲ್ಲಿ ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಅಧ್ಯಕ್ಷರಾದ ಕೃಷ್ಣಮೂರ್ತಿ ಪೂಜಾರ್, ಶಿವಕುಮಾರ್ ವಿಶ್ವನಾಥ್ ರಾಮೇಗೌಡ ಬೆಳಗೆರೆ ರಮೇಶ್ ಪಾತಲಿಂಗಪ್ಪ, ಕಿರಣ್, ರಾಮು ಪೂಜಾರಿ ಸಿ.ಕೆ ಕುಮಾರ್ ಪೂಜಣ್ಣ ಈಶಣ್ಣ ಜನಾರ್ಧನ್ ರಾಜು ರಾಜಣ್ಣ ಮಂಜುನಾಥ್ ಕಾರ್ತಿಕ್ ಮಹೇಂದ್ರ ರಮೇಶ್ ಶಿವುಪುಜಾರಿ ವಿವೇಕ್ ಸ್ವಾಮಿ ಅನಿಲ್ ಮತ್ತಿತರರು ಪಾಲ್ಗೊಂಡಿದ್ದರು

### ಕನಕ ಜಯಂತಿ ಸಭೆ ಮುಂದೂಡಿಕೆ

ಚಿತ್ರದುರ್ಗ : ಚಿತ್ರದುರ್ಗ ಜಿಲ್ಲಾ ಕೇಂದ್ರದಲ್ಲಿ ಕನಕ ಜಯಂತಿ ಆಚರಣೆ ಸಂಬಂದ ನ. 18 ರಂದು ನಡೆಸಲು ಉದ್ದೇಶಿಸಲಾಗಿದ್ದ ಪೂರ್ವಭಾವಿ ಸಭೆಯನ್ನು ನ. 20 ಕ್ಕೆ ಮುಂದೂಡಲಾಗಿದೆ. ಸಭೆಯು ನ. 20 ರಂದು ಬೆ. 11 ಗಂಟೆಗೆ ಜಿಲ್ಲಾಧಿಕಾರಿ ಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಧಿಕಾರಿ ಗಳ ಅಧ್ಯಕ್ಷತೆಯಲ್ಲಿ ನಡೆಯಲಿದೆ.

### ಬಿಎಸ್‌ಎನ್‌ಎಲ್ 4ಜಿ 5ಜಿ

ದಾವಣಗೆರೆ; 2ಜಿ, 3ಜಿ ಸಿಮ್‌ಗಳನ್ನು ಹೊಸ 4ಜಿ,5ಜಿ ಬಿಎಸ್‌ಎನ್‌ಎಲ್ ಸಿಮ್‌ಗಳಿಗೆ ಅಪ್ ಗ್ರೇಡ್ ಮಾಡಿಕೊಳ್ಳಿರಿ. ಹಾಗೂ ಉಚಿತ ಹೆಚ್ಚುವರಿ 5ಜಿಬಿ ಡೇಟಾ 5 ತಿಂಗಳ ಅವಧಿವರೆಗೆ ಪಡೆಯಿರಿ. ಈ ಸುವರ್ಣ ಅವಕಾಶ 31, ಜನವರಿ 2024 ರವರೆಗೆ ಎಂದು ಬಿ.ಎಸ್.ಎನ್ ಎಲ್ ಜನರಲ್ ಮ್ಯಾನೇಜರ್ ತಿಳಿಸಿದ್ದಾರೆ.

# ರೈತರು ಕಡ್ಡಾಯವಾಗಿ ಎಫ್‌ಐಡಿ ಮಾಡಿಸಿಕೊಳ್ಳಿ

» ನಾಯಕನಹಟ್ಟಿ



ರೈತರು ಕಡ್ಡಾಯವಾಗಿ ಎಫ್‌ಐಡಿ ಮಾಡಿಸಿಕೊಳ್ಳಬೇಕೆಂದು ತಳಕು ಕೃಷಿ ಇಲಾಖೆಯ ಅಧಿಕಾರಿಯಾದ ಮಂಜುನಾಥಮನವಿಮಾಡಿಕೊಂಡರು. ನಾಯಕನಹಟ್ಟಿ ಸಮೀಪದ ತಳಕು ಹೋಬಳಿಯ ಕೃಷಿ ಇಲಾಖೆ ಅಧಿಕಾರಿ ಮಂಜುನಾಥ ಸುದ್ದಿಗಾರರೊಂದಿಗೆ ಮಾಹಿತಿ ಹಂಚಿಕೊಂಡರು. ನಂತರ ಮಾತನಾಡಿದ ಅವರು ಬರಪರಿಹಾರದ ಹಣ ಪಡೆಯಬೇಕಾದರೆ ರೈತರು ಕಡ್ಡಾಯವಾಗಿ ಎಫ್‌ಐಡಿ ಮಾಡಿಸಲೇಬೇಕು, ಒಂದು ವೇಳೆ ಎಫ್‌ಐಡಿ ಮಾಡಿಸಿದಿದ್ದರೆ ಹಣ ನಿಮ್ಮ ಖಾತೆಗೆಬೀಳುವುದಿಲ್ಲ.ಎಫ್‌ಐಡಿ ಮಾಡದೆ ಇರುವ ರೈತರು ಕೂಡಲೇ ತಮ್ಮ ಸಮೀಪದ ಸಾಮಾನ್ಯ ಸೇವಾ ಕೇಂದ್ರಕ್ಕೆ ಹೋಗಿ ಎಫ್‌ಐಡಿ ಮಾಡಿಸಬೇಕು. ಈ ಬಾರಿ ಎಫ್‌ಐಡಿ ಹೊಂದಿದ ರೈತರಿಗೆ ಮಾತ್ರ ಬರಪರಿಹಾರ ಮೊತ್ತ ಜಮಾ ಆಗಲಿದೆ ಎಂದು ತಿಳಿಸಿದ್ದಾರೆ. ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಎಲ್ಲಾ ಇಲಾಖೆಗಳಲ್ಲಿ ರೈತರಿಗಾಗಿ ಜಾರಿಯಲ್ಲಿರುವ ಯೋಜನೆಗಳ ಸೌಲಭ್ಯ ಪಡೆಯಲು ಎಫ್‌ಐಡಿ ಕಡ್ಡಾಯವಾಗಿರುತ್ತದೆ. ಆದ್ದರಿಂದ ರೈತರು ನಿರ್ಲಕ್ಷ್ಯಕ್ಕೆ ಒಳಗಾಗದೆ ಎಫ್‌ಐಡಿ ಮಾಡಿಸಿಕೊಳ್ಳಿ ಎಂದು ಅವರು ಪತ್ರಿಕೆಯೊಂದಿಗೆ ಮಾತನಾಡಿದರು.

ಪ್ರತಿಯೊಬ್ಬ ರೈತರು ಪಹಣಿ ತೆಗೆದುಕೊಂಡು ಕೃಷಿ ಇಲಾಖೆಗೆ ನಮ್ಮ ಜಮೀನುಗಳು ಎಫ್‌ಐಡಿ ಆಗಿದಿಯೋ ಇಲ್ಲವೋ ಪರಿಶೀಲಿಸಿಕೊಳ್ಳಿ ಎಂದು ಹೇಳಿದರು.

## ಪ್ರಮುಖ ಸುದ್ದಿ

# ದೇಶದ ಶಾಂತಿಗಾಗಿ ಪ್ರಾರ್ಥನಾ ಕೂಟ

» ಚಿತ್ರದುರ್ಗ

ಶಾಂತಿ ಮತ್ತು ಸೌಹಾರ್ದತೆಯನ್ನು ಕಾಪಾಡಿಕೊಂಡು ಹೋಗಲು ಬೆಂಗಳೂರು ಹೆಬ್ಬಾಳದ ಡಾ.ರವಿಮಣಿ ಅವರ ನೇತೃತ್ವದಲ್ಲಿ ವಿಕ್ಟರಿ ಇಂಟರ್‌ನ್ಯಾಷನಲ್ ಎ ಜೆ ಸಂಸ್ಥೆ ವತಿಯಿಂದ ಪ್ರಾರ್ಥನಾ ಕೂಟವನ್ನು ಹಮ್ಮಿಕೊಳ್ಳಲಾಗಿತ್ತು.

ಶಾಂತಿ, ಸೌಹಾರ್ದತೆ ಬರಗಾಲ ನಿವಾರಣೆ, ಬಡತನ ನಿವಾರಣೆ ಮತ್ತು ವಿದ್ಯಾಭ್ಯಾಸಕ್ಕಾಗಿ ನಿರಂತರವಾಗಿ ವಿಕ್ಟರಿ ಇಂಟರ್‌ನ್ಯಾಷನಲ್ ಎ ಜೆ ಸಂಸ್ಥೆಯು ಪ್ರಾರ್ಥನಾ ಕೂಟಗಳನ್ನು ಹಮ್ಮಿಕೊಳ್ಳುತ್ತಿದ್ದು,ಈಬಾರಿಚಿತ್ರದುರ್ಗದಲ್ಲಿ ನಡೆಯುತ್ತಿರುವ ಪ್ರಾರ್ಥನಾ ಕೂಟವು ಮುಂಬರುವ ಚುನಾವಣೆಯು ಶಾಂತಿ ಮತ್ತು ಸಾಹರ್ದಯುತವಾಗಿ ನಡೆಯಲಿ ಎಂದು ಡಾ.ರವಿಮಣಿಯವರು ಭಗವಾನ್ ಏಸುವಿನಲ್ಲಿ ಪ್ರಾರ್ಥಿಸಿದರು.

ಪ್ರಾರ್ಥನಾಕೂಟ ನಡೆಸಿಕೊಟ್ಟ ಹೆಬ್ಬಾಳ ವಿಕ್ಟರಿ ಇಂಟರ್‌ನ್ಯಾಷನಲ್ ಎ ಜೆ ಸಂಸ್ಥೆಯ ಮುಖ್ಯಸ್ಥರಾದ ಡಾ.ರವಿಮಣಿಯವರು ಕರ್ನಾಟಕ ಮತ್ತು ದೇಶದ ಶಾಂತಿಗಾಗಿ ಪ್ರಾರ್ಥಿಸುತ್ತಿರುವುದಾಗಿ ಹೇಳಿದ್ದು, ಈಗಾಗಲೇ ರಾಜ್ಯದ ಹದಿನೇಳು ಜಿಲ್ಲೆಗಳಲ್ಲಿ





ಪ್ರಾರ್ಥನಾ ಕೂಟಗಳನ್ನು ನಡೆಸಲಾಗಿದ್ದು, ಜನರ ಜೀವನ ಸುಧಾರಣೆಯಾಗಬೇಕು ಎಂಬ ಮಹಾ ಉದ್ದೇಶವನ್ನು ಹೊಂದಲಾಗಿದ್ದು, ಹಾಗೆಯೇ ದೇಶದಲ್ಲಿ ಶಾಂತಿ ನಿರ್ಮಾಣಕ್ಕಾಗಿಯೂ ಭಗವಂತನಲ್ಲಿ ಪ್ರಾರ್ಥಿಸಿಕೊಳ್ಳಲಾಗುತ್ತಿದೆ ಎಂದು ಡಾ.ರವಿಮಣಿ ಪ್ರಾರ್ಥನಾ ಕೂಟದಲ್ಲಿ ತಮ್ಮ ವಿಚಾರವನ್ನು ಪ್ರಸ್ತಾಪಿಸಿದರು.

ಇದೇ ಸಂದರ್ಭದಲ್ಲಿ ಉಪಸ್ಥಿತರಿದ್ದ ಚಿತ್ರದುರ್ಗ ಎ ಜೆ ಚರ್ಚ್‌ನ ರೆವರೆಂಡ್ ಫಾದರ್ ಎಂ ಎಸ್ ರಾಜು ಅವರು ಮಾತನಾಡಿ ಡಾ.ರವಿಮಣಿಯವರು ಈಗಾಗಲೇ ಹದಿನೇಳು ಜಿಲ್ಲೆಗಳನ್ನು ಆಯ್ಕೆಮಾಡಿಕೊಂಡು ಶಾಂತಿಗಾಗಿ ಪ್ರಾರ್ಥಿಸಿದ್ದು, ಮಳೆ, ಬೆಳೆ ಆಗುವ ಮೂಲಕ ಜನರು ಸಮೃದ್ಧಿಯಾಗಿ ಬದುಕಲಿ ಎಂಬ ಆಶಯವನ್ನು ಪ್ರಾರ್ಥನಾ ಕೂಟ ಹೊಂದಿದ್ದು, ಭಗವಾನ್ ಏಸು ಕ್ರಿಸ್ತ ಎಲ್ಲರಿಗೂ ಶಾಂತಿ ಮತ್ತು ಸಮೃದ್ಧಿಯನ್ನು ನೀಡಲಿ ಎಂದು ಶುಭ ಹಾರೈಸಿದರು.

ಪ್ರಾರ್ಥನಾ ಕೂಟದಲ್ಲಿ ಹಿರಿಯ ಫಾದರ್ ಅಲೆಕ್ಸಾಂಡರ್ ಅವರು ಉಪಸ್ಥಿತರಿದ್ದು, ಹಾಗೂ ಜಿಲ್ಲೆಯ ನೂರಾರು ಜನ ಏಸು ಕ್ರಿಸ್ತನ ಅನುಯಾಯಿಗಳು ಪ್ರಾರ್ಥನಾ ಕೂಟದಲ್ಲಿ ಭಾಗವಹಿಸಿ ದೇಶದ ಶಾಂತಿ ಮತ್ತು ಸಮಗ್ರತೆಗಾಗಿ ಬೆಳಿಗ್ಗೆಯಿಂದಲೇ ಪ್ರಾರ್ಥನೆ ನಡೆಸಿದರು.

## ಫಾಸ್ಟ್ ನ್ಯೂಸ್

### ಲೋಕಾಯುಕ್ತ ಅಧಿಕಾರಿಗಳಿಂದ ಅಹವಾಲು ಸ್ವೀಕಾರ

» **ಚಿತ್ರದುರ್ಗ**

ಇದೇ ನವೆಂಬರ್ 20 ಮತ್ತು 21 ರಂದು ಚಿತ್ರದುರ್ಗ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಿಗೆ ಖುದ್ದಾಗಿ ಲೋಕಾಯುಕ್ತ ಅಧಿಕಾರಿಗಳು ಭೇಟಿ ನೀಡಿ ಸಾರ್ವಜನಿಕರಿಂದ ದೂರು ಹಾಗೂ ಅವಹಾಲುಗಳನ್ನು ಸ್ವೀಕರಿಸುವರು. ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿಕರ ಕೆಲಸ ಮಾಡಿಕೊಡಲು ಲಂಚಕ್ಕಾಗಿ ಬೇಡಿಕೆಯಿಟ್ಟಲ್ಲಿ, ಯೋಜನೆಗಳ ಅನುಷ್ಠಾನದಲ್ಲಿ ಅನಗತ್ಯ ವಿಳಂಬ, ಕರ್ತವ್ಯದಲ್ಲಿ ನಿರ್ಲಕ್ಷತನ, ತಾರತಮ್ಯ ತೋರುವುದು, ಅರ್ಹ ಫಲಾನುಭವಿಗಳಿಗೆ ಸರ್ಕಾರದ ಯೋಜನೆಗಳ ಲಾಭ ಸರಿಯಾದ ರೀತಿಯಲ್ಲಿ ತಲುಪಿಸದೇ ಇರುವುದು ಇತ್ಯಾದಿ ವಿಷಯಗಳಿಗೆ ಸಂಬಂಧಿಸಿದಂತೆ ದೂರುಗಳನ್ನು ನಿಗಧಿತ ನಮೂನೆಯಲ್ಲಿ ಸಲ್ಲಿಸಬಹುದಾಗಿದೆ.

ಲೋಕಾಯುಕ್ತ ಅಧಿಕಾರಿಗಳ ತಾಲ್ಲೂಕು ಭೇಟಿ ವಿವರ: ನ.20ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1 ರವರೆಗೆ ಹೊಸದುರ್ಗ ತಾಲ್ಲೂಕು ಕಚೇರಿಯಲ್ಲಿ ಹಾಗೂ ಅಂದು ಮಧ್ಯಾಹ್ನ 2 ರಿಂದ ಸಂಜೆ 5 ರವರೆಗೆ ಹೊಳಲ್ಕೆರೆ ತಾಲ್ಲೂಕು ಕಚೇರಿಯಲ್ಲಿ ಪೊಲೀಸ್ ನಿರೀಕ್ಷಕರು-2 ಹಾಜರಿದ್ದು, ಸಾರ್ವಜನಿಕರಿಂದ ಅಹವಾಲು ಸ್ವೀಕರಿಸುವರು.

ನ.20ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1 ರವರೆಗೆ ಮೊಳಕಾಲ್ಮೂರು ತಾಲ್ಲೂಕು ಕಚೇರಿಯಲ್ಲಿ ಹಾಗೂ ಅಂದು ಮಧ್ಯಾಹ್ನ 2.30 ರಿಂದ ಸಂಜೆ 5.30 ರವರೆಗೆ ಚಳ್ಳಕೆರೆ ತಾಲ್ಲೂಕು ಕಚೇರಿಯಲ್ಲಿ ಪೊಲೀಸ್ ನಿರೀಕ್ಷಕರು-3 ಹಾಜರಿದ್ದು, ಸಾರ್ವಜನಿಕರಿಂದ ಅಹವಾಲು ಸ್ವೀಕರಿಸುವರು.

ನ.21ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1 ರವರೆಗೆ ಹಿರಿಯೂರು ತಾಲ್ಲೂಕು ಕಚೇರಿಯಲ್ಲಿ ಹಾಗೂ ಅಂದು ಮಧ್ಯಾಹ್ನ 2 ರಿಂದ ಸಂಜೆ 5 ರವರೆಗೆ ಚಿತ್ರದುರ್ಗ ತಾಲ್ಲೂಕು ಕಚೇರಿಯಲ್ಲಿ ಪೊಲೀಸ್ ಉಪಾಧೀಕ್ಷಕರು ಹಾಜರಿದ್ದು, ಸಾರ್ವಜನಿಕರಿಂದ ದೂರು ಅಹವಾಲು ಸ್ವೀಕರಿಸುವರು ಎಂದು ಕರ್ನಾಟಕ ಲೋಕಾಯುಕ್ತ ಚಿತ್ರದುರ್ಗ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ನ.24ರಂದು ದಿಶಾ ಸಭೆ

» **ಚಿತ್ರದುರ್ಗ**

ಕೇಂದ್ರ ಪುರಸ್ಕೃತ ಯೋಜನೆಗಳ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿಯ ದಿಶಾ ಸಭೆಯನ್ನು ನವೆಂಬರ್ 24ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಸಚಿವರು ಹಾಗೂ ಸಂಸದ ಎ.ನಾರಾಯಣಸ್ವಾಮಿ ಸಭೆಯ ಅಧ್ಯಕ್ಷತೆ ವಹಿಸುವರು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ತಿಳಿಸಿದ್ದಾರೆ.

### ನ.18ರಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಸದಸ್ಯರ ಜಿಲ್ಲಾ ಭೇಟಿ

» **ಚಿತ್ರದುರ್ಗ**

ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಸದಸ್ಯರಾದ ಡಾ.ಕೆ.ಟಿ.ತಿಪ್ಪೇಸ್ವಾಮಿ ಅವರು ಇದೇ ನವೆಂಬರ್ 18ರಂದು ಚಿತ್ರದುರ್ಗ ನಗರಕ್ಕೆ ಭೇಟಿ ನೀಡುವರು. ನವೆಂಬರ್ 18ರಂದು ಬೆಳಿಗ್ಗೆ 11 ರಿಂದ 1 ರವರೆಗೆ ಜಿಲ್ಲಾ ಪಂಚಾಯಿತಿ ಮಿನಿ ಸಭಾಂಗಣದಲ್ಲಿ ಚಿತ್ರದುರ್ಗ ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ತಹಶೀಲ್ದಾರರು ಮತ್ತು ಶಿಶುಅಭಿವೃದ್ಧಿ ಯೋಜನಾಧಿಕಾರಿಗಳ ಜೊತೆಗೆ ತಾಲ್ಲೂಕು ಹಂತದ ಮಕ್ಕಳ ಹಕ್ಕುಗಳು ಹಾಗೂ ರಕ್ಷಣಾ ವ್ಯವಸ್ಥೆಗಳ ಬಗ್ಗೆ ಪ್ರಗತಿ ಪರಿಶೀಲನಾ ಸಭೆ ನಡೆಸುವರು. ಮಧ್ಯಾಹ್ನ 2.30 ರಿಂದ 4 ರವರೆಗೆ ಜಿಲ್ಲಾ ಪಂಚಾಯಿತಿ ಮಿನಿ ಸಭಾಂಗಣದಲ್ಲಿ ಜಿಲ್ಲೆಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಹಾಗೂ ಎಲ್ಲಾ ತಾಲ್ಲೂಕುಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳೊಂದಿಗೆ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆ-2009 ಹಾಗೂ ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ-2016ರ ಅನುಷ್ಟಾನದ ಕುರಿತು ಪ್ರಗತಿ ಪರಿಶೀಲನಾ ಸಭೆ ನಡೆಸುವರು ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಕಾರ್ಯದರ್ಶಿ ತಿಳಿಸಿದ್ದಾರೆ.

### 18ಕ್ಕೆ ಮಹಿಳೆಯರಿಗೆ ಕಾನೂನು ಅರಿವು

» **ದಾವಣಗೆರೆ**

ಸ್ಲಂ ಜನಾಂದೋಲನ ಕರ್ನಾಟಕ ಹಾಗೂ ಸಾವಿತ್ರಿ ಬಾಯಿ ಪುಲೆ ಮಹಿಳಾ ಸಂಘಟನೆ, ಜಿಲ್ಲಾ ಸಮಿತಿ, ದಾವಣಗೆರೆ ವತಿಯಿಂದ ಇದೇ 18ರ ಶನಿವಾರ ಬೆಳಿಗ್ಗೆ 11ಕ್ಕೆ ಪ್ರವಾಸಿ ಮಂದಿರ ರಸ್ತೆಯಲ್ಲಿರುವ ರೋಟರಿ ಬಾಲಭವನದಲ್ಲಿ ಮಹಿಳೆಯರಿಗಾಗಿ ಇರುವ ಕಾನೂನುಗಳ ಬಗ್ಗೆ ಕಾನೂನು ಅರಿವು ಕಾರ್ಯಕ್ರಮ ಆಯೋಜಿಸಲಾಗಿದೆ. ಕಾರ್ಯಕ್ರಮದ ಉದ್ಘಾಟನೆಯನ್ನು ದಾವಣಗೆರೆ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಹೆಚ್. ಅರುಣ್‌ಕುಮಾರ್, ಅಧ್ಯಕ್ಷತೆಯನ್ನು ಸ್ಲಂ ಜನಾಂದೋಲನ ಕರ್ನಾಟಕದ ಅಧ್ಯಕ್ಷ ಎಂ.ಶಬ್ಬೀರ್ ಸಾಬ್ ವಹಿಸುವರು.

## ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆ;

# ವಿದ್ಯಾರ್ಥಿ ದೆಸೆಯಲ್ಲೇ ನಾಯಕತ್ವ ಬೆಳೆಸಿಕೊಳ್ಳಿ

» **ದಾವಣಗೆರೆ**

ಯುವ ಸಂಸತ್ ಸ್ಪರ್ಧೆಯು ಮಕ್ಕಳಲ್ಲಿ ನಾಯಕತ್ವ ಗುಣವನ್ನು ಬೆಳೆಸುವುದರ ಜೊತೆಗೆ ಸರ್ಕಾರ ಮತ್ತು ಸಂಸದೀಯ ವ್ಯವಸ್ಥೆಯಬಗ್ಗೆಮನವರಿಕೆಮಾಡಿಕೊಡಲು ಸಹಕಾರಿಯಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಜಿ. ಕೊಟ್ರೇಶ್ ತಿಳಿಸಿದರು.

ಶುಕ್ರವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಾರ್ವಜನಿಕ ಶಿಕ್ಷಣ ಇಲಾಖೆ ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಸಚಿವಾಲಯ ಬೆಂಗಳೂರು ಇವರ ಸಹಯೋಗದೊಂದಿಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಫ್ರೌಢಶಾಲಾ ವಿಭಾಗದ ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳಲ್ಲಿ ಅಡಗಿರುವ ಪ್ರತಿಭೆಯನ್ನು ಅನಾವರಣಗೊಳಿಸಲು ಹಾಗೂ ಅವರ ಆಲೋಚನೆಗಳನ್ನು ಮುಕ್ತವಾಗಿ ಚರ್ಚಿಸಲು ಯುವ ಸಂಸತ್ ಸ್ಪರ್ಧೆಯು ಉತ್ತಮ ವೇದಿಕೆಯಾಗಿದ್ದು, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಆಡಳಿತ ಪಕ್ಷ ಹಾಗೂ ವಿರೋಧ ಪಕ್ಷಗಳು ಹೇಗೆ





ಕಾರ್ಯನಿರ್ವಹಿಸತ್ತವೆ ಎಂಬುದನ್ನು ಪ್ರತಿಬಿಂಬಿಸುವ ನಿಟ್ಟಿನಲ್ಲಿ ಯುವ ಸಂಸತ್ ಸ್ಪರ್ಧೆ ಸಹಕಾರಿಯಾಗಿದೆ. ಈ ಮಾದರಿ ಕಲಾಪದಲ್ಲಿ ಸಮಾಜದಲ್ಲಿನ ಸಮಸ್ಯೆಗಳನ್ನು ವ್ಯಕ್ತಪಡಿಸಬಹುದು ಎಂದರು.

ಯುವ ಸಂಸತ್ ಸ್ಪರ್ಧೆಯಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳು ಈ ಮಾದರಿ ಅಧಿವೇಶನದಲ್ಲಿ ಚರ್ಚೆಗಳು ಆರೋಗ್ಯಪೂರ್ಣವಾಗಿ ಹಾಗೂ ವಾದ-ವಿವಾದಗಳು ಸಾಮಾಜಿಕ ಬೆಳವಣಿಗೆಯ ಪರವಾಗಿರಬೇಕು. ಮಕ್ಕಳ ಮುಂದಿನ ಭವಿಷ್ಯಕ್ಕೆ ಈ ಸ್ಪರ್ಧೆಗಳು ದಾರಿದೀಪವಾಗಬೇಕು. ಜನ ಪ್ರತಿನಿಧಿಗಳನ್ನು ಸಿದ್ಧಗೊಳಿಸಲು ಯುವ ಸಂಸತ್ ಕಾರ್ಯಕ್ರಮ ಪ್ರೇರಣೆಯಾಗಬೇಕು.

ಒಬ್ಬ ಯಜಮಾನ ತನ್ನ ಕುಟುಂಬವನ್ನು ಹೇಗೆ ನಿರ್ವಹಿಸುತ್ತಾನೋ ಹಾಗೆ ರಾಜ್ಯ ಹಾಗೂ ದೇಶವನ್ನು ಮುನ್ನಡೆಸಲು ಮುಖ್ಯಮಂತ್ರಿ, ಪ್ರಧಾನ ಮಂತ್ರಿ ಇರುತ್ತಾರೆ. ಅವರ ಕಾರ್ಯವೈಖರಿ ಗಮನಿಸಿ, ಸಲಹೆಗಳನ್ನು ನೀಡಲು, ತಪ್ಪುಗಳನ್ನು ತಿದ್ದಲು ವಿರೋಧ ಪಕ್ಷಗಳಿರುತ್ತವೆ ಎಂದು ಅವರು ಹೇಳಿದರು.

ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆಯಲ್ಲಿ ಭಾಗವಹಿಸಿ ವಿಜೇತರಾದ ದಾವಣಗೆರೆ ಉತ್ತರ ವಲಯದ ಮೆಳ್ಳೆಕಟ್ಟೆ ಸರ್ಕಾರಿ ಪೌಢಶಾಲೆಯ ಮೇಘನ ಬಿ.ಟಿ ಪ್ರಥಮ ಸ್ಥಾನ, ಹರಿಹರ ತಾಲ್ಲೂಕಿನ ಹಾಲಿವಾಣ ಸರ್ಕಾರಿ ಪ್ರೌಢಶಾಲೆಯ ಗಾಯಿತ್ರಿ ಕೆ.ಎಂ ದ್ವಿತೀಯ ಸ್ಥಾನ ಹಾಗೂ ತೃತೀಯ ಸ್ಥಾನ ಪಡೆದ ಹೊನ್ನಾಳಿ ತಾಲ್ಲೂಕಿನ ಸರ್ಕಾರಿ ಪ್ರೌಢಶಾಲೆಯ ದ್ರಾಕ್ಷಯಣಿ ಎಂಬ ವಿದ್ಯಾರ್ಥಿಗಳಿಗೆ ನಗದು ಬಹುಮಾನ ವಿತರಿಸಲಾಯಿತು.

ವಿಷಯ ಪರಿವೀಕ್ಷಕರಾದ ಶಶಿಕಲಾ, ವಸಂತಕುಮಾರಿ, ತೀರ್ಪುಗಾರರಾದ ಮಂಜುನಾಥ್, ಪ್ರಭು ಕೆ.ಸಿ, ಕರಿಯಪ್ಪ ಜಿ.ಆರ್ ಉಪಸ್ಥಿತರಿದ್ದರು.

# ಗ್ರಂಥಾಲಯಗಳು ಜ್ಞಾನದ ಭಂಡಾರ ಕೇಂದ್ರವಾಗಿದ್ದು ಇವುಗಳ ಸದುಪಯೋಗದತ್ತ ಹೆಚ್ಚು ಗಮನಿಸಬೇಕು

» **ಚಳ್ಳಕೆರೆ**

ನಗರದ ಸೋಮಗುದ್ದು ರಸ್ತೆಯ ಬಿ.ಆರ್. ಅಂಬೇಡ್ಕರ್ ಕೊಳಚೆ ಪ್ರದೇಶ ಗ್ರಂಥಾಲಯದಲ್ಲಿ ಗ್ರಂಥಾಲಯ ಪಿತಾಮಹ ಎಸ್.ಆರ್. ರಂಗನಾಥರವರ ಗ್ರಂಥಾಲಯ ಸಪ್ತಾಹವನ್ನು ಆಚರಣೆ ಮಾಡಲಾಯಿತು.

ಮುಖ್ಯೋಪಾಧ್ಯಾಯ ರೇವಣ್ಣ ಮಾತನಾಡಿ, ಇಂದು ಗ್ರಂಥಾಲಯಗಳು ಎಲ್ಲರಿಗೂ ಅನಿವಾರ್ಯವಾಗಿವೆ. ಪ್ರತಿಯೊಂದು ವಿಷಯವೂ ಗ್ರಂಥಾಲಯ ಪುಸ್ತಕದ ಮೂಲಕ ಪಡೆಯಬಹುದು. ಗ್ರಂಥಾಲಯ ಪಿತಾಮಹ ರಂಗನಾಥರವರ ದೂರದೃಷ್ಠಿಯ ಫಲವಾಗಿ ಇಂದು ನಾಡಿನಾದ್ಯಂತ ಸಾವಿರಾರು ಗ್ರಂಥಾಲಯಗಳಲ್ಲಿ ಈ ಸಪ್ತಾಹ ಆಚರಣೆ ಮಾಡಲಾಗುತ್ತಿದೆ. ಪ್ರತಿವರ್ಷ ನಡೆಯುವ ಈ ಕಾರ್ಯಕ್ರಮಕ್ಕೆ ಎಲ್ಲರೂ ಸಹಕಾರ ನೀಡಬೇಕೆಂದರು.

ಅಖಂಡ ರೈತ ಸಂಘದ ಸಂಸ್ಥಾಪಕ ಅಧ್ಯಕ್ಷ



ಸೋಮಗುದ್ದುರಂಗಸ್ವಾಮಿ ಮಾತನಾಡಿ, ಗ್ರಂಥಾಲಯಗಳು ಜ್ಞಾನದ ಭಂಡಾರವಾಗಿವೆ. ಪತಿಯೊಬ್ಬ ವ್ಯಕ್ತಿಯೂ ಗ್ರಂಥಾಲಯ ಒಳಒಕ್ಕು ಪುಸ್ತಕದವಿಚಾರಗಳಬಗ್ಗೆಮಾಹಿತಿಪಡೆಯಬೇಕು. ಜ್ಞಾನವನ್ನು ಸುಲಭವಾಗಿ ಹೆಚ್ಚಿಸಿಕೊಳ್ಳುವ ಏಕೈಕ ಮಾತ್ರ ಗ್ರಂಥಾಲಯಗಳು ಎಂದರು. ಗ್ರಂಥಪಾಲಕ ಎನ್.ತಿಪ್ಪೇರುದ್ರ, ಸರ್ಕಾರಿ ಪದವಿ ಪೂರ್ವ ಉಪನ್ಯಾಸಕರಾದ ಹಬಿಬುಲ್ಲಾ, ಚಂದ್ರಶೇಖರ್, ವಸಂತಕುಮಾರ್, ಕೆ.ದುರುಗೇಶ್ ಮುಂತಾದವರು ಉಪಸ್ಥಿತರಿದ್ದರು.

## ವಿ.ವಿ ಪುರಕ್ಕೆ ಡಾ.ಜಿ.ಪರಮೇಶ್ವರ್ ಭೇಟಿ



» **ಹಿರಿಯೂರು**

ತಾಲ್ಲೂಕಿನ ವಿ.ವಿ.ಪುರ ಗ್ರಾಮಕ್ಕೆ ಆಗಮಿಸಿದ ಕರ್ನಾಟಕ ಸರ್ಕಾರದ ಗೃಹ ಮಂತ್ರಿಗಳಾದ ಡಾ ಜಿ ಪರಮೇಶ್ವರ್ ರವರಿಗೆ ಹಿರಿಯೂರು ತಾಲ್ಲೂಕು ಬ್ಲಾಕ್ ಕಾಂಗ್ರೆಸ್ ಸಮಿತಿ ವತಿಯಿಂದ ಅದ್ದೂರಿಯಾಗಿ ಸ್ವಾಗತಿಸಲಾಯಿತು. ಈ ಸಂದರ್ಭದಲ್ಲಿ ಕರ್ನಾಟಕ ಸರ್ಕಾರ ಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಸಚಿವರಾದ ಡಿ.ಸುಧಾಕರ್ , ಚಳ್ಳಕೆರೆ ವಿಧಾನಸಭಾ ಕ್ಷೇತ್ರದ ಶಾಸಕರಾದ ಟಿ.ರಘುಮೂರ್ತಿ, ಮಾಜಿ ಸಚಿವರಾದ ಹೆಚ್.ಆಂಜನೇಯ, ಮಾಜಿ ಸಂಸದರಾದ ಬಿ.ಎನ್. ಚಂದ್ರಪ್ಪ ಹಾಗೂ ನೂರಾರು ಜನ ಉಪಸ್ಥಿತರಿದ್ದರು

## ಜಿಲ್ಲಾ ಉಸ್ತುವಾರಿ ಸಚಿವರ ಪ್ರವಾಸ

**ದಾವಣಗೆರೆ:** ಗಣಿ, ಭೂವಿಜ್ಞಾನ, ತೋಟಗಾರಿಕೆ ಮತ್ತು ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ಅವರು ನ.20 ರಂದು ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ. ನ.20 ರಂದು ಮ.1 ಗಂಟೆಗೆ ದಾವಣಗೆರೆಯಿಂದ ಜಗಳೂರಿಗೆ ಹೊರಟು ಮ.2 ಗಂಟೆಗೆ ಜಗಳೂರು ತಾಲ್ಲೂಕು ವ್ಯಾಪ್ತಿಯ ಬರಪರಿಹಾರ ಕಾಮಗಾರಿಗಳು ಹಾಗೂ ಕುಡಿಯುವ ನೀರಿನ ಯೋಜನೆಗಳ ಕುರಿತು ಸ್ಥಳ ಪರಿಶೀಲನೆ ನಡೆಸುವರು. ಮ.3 ಗಂಟೆಗೆ ಜಗಳೂರು ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ಬರಪರಿಹಾರ ಕಾರ್ಯಕ್ರಮಗಳ ಪರಿಶೀಲನಾ ಸಭೆ ಮತ್ತು ಜಗಳೂರು ತಾಲ್ಲೂಕು ಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಭಾಗವಹಿಸುವರು. ಸಂ.5 ಗಂಟೆಗೆ ಜಗಳೂರು ತಾಲ್ಲೂಕಿನ ಪಕ್ಷದ ಕಾರ್ಯಕರ್ತರ ಭೇಟಿ ಮಾಡುವರು. ಸಂ.6 ಗಂಟೆಗೆ ದಾವಣಗೆರೆ ಆಗಮಿಸಿ ವಾಸ್ತವ್ಯ ಹೂಡುವರು.

## ಮಿಶ್ರ ತಳಿ ಹಸು ಘಟಕ ಅನುಷ್ಟಾನಕ್ಕೆ ಅರ್ಜಿ

**ದಾವಣಗೆರೆ:** ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ ವತಿಯಿಂದ ಪ್ರಸಕ್ತ ಸಾಲಿನ ಹಾಲು ಉತ್ಪಾದಕರಿಗೆ ಒಂದು ಮಿಶ್ರತಳಿ ಹಸು ಘಟಕ ಅನುಷ್ಠಾನಕ್ಕೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ತಾಲ್ಲೂಕಿಗೆ ವಿಶೇಷ ಘಟಕ ಯೋಜನೆಯಡಿ 4 ಗುರಿಗಳು ಮತ್ತು ಗಿರಿಜನ ಉಪಯೋಜನೆಯಡಿ 6 ಗುರಿ ನಿಗಡಿಪಡಿಸಲಾಗಿದೆ. ಒಂದು ಮಿಶ್ರ ತಳಿ ಹಸು ಘಟಕದ ವೆಚ್ಚ ರೂ.65,000/- ಇದ್ದು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳಿಂದ ( ಶೇ 90) ರೂ.58,500/- ಸಹಾಯ ಧನ ಹಾಗೂ ( ಶೇ 10) ರೂ.6500. ಫಲಾನುಭವಿಗಳ ವಂತಿಗೆ ಅಥವಾ ಬ್ಯಾಂಕಿನ ಸಾಲದೊಂದಿಗೆ ಅನುಷ್ಟಾನಗೊಳಿಸಲಾಗುವುದು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಕೂಲಿ ಕಾರ್ಮಿಕರು ಕಾರ್ಮಿಕರು ಮತ್ತು ಪಶು ಸಂಗೋಪನೆಯಲ್ಲಿ ತೊಡಗಿಸಿಕೊಂಡು ಕಡ್ಡಾಯವಾಗಿ ಹಾಲು ಉತ್ಪಾದಕರ ಸಹಕಾರ ಸಂಘದಲ್ಲಿ ಸದಸ್ಯತ್ವ ಹೊಂದಿರುವ ಆಸಕ್ತರನ್ನು ಆಯ್ಕೆ ಮಾಡಲಾಗುವುದು, ಮಹಿಳೆಯರಿಗೆ ಶೇ. 3.3 ರಷ್ಟು ಮತ್ತು ಅಂಗವಿಕಲರಿಗೆ ಶೇ 3 ರಷ್ಟು ಆದ್ಯತೆ ನೀಡಲಾಗುವುದು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳು ಆರ್.ಡಿ, ಸಂಖ್ಯೆ ಇರುವ ಜಾತಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಹೊಂದಿರಬೇಕು. ಅರ್ಜಿ ಸಲ್ಲಿಸಲು ಡಿ.5 ಕೊನೆಯದಿನವಾಗಿರುತ್ತದೆ. ಅರ್ಜಿ ನಮೂನೆಗೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಪಶು ವೈದ್ಯ ಸಂಸ್ಥೆಗಳನ್ನು ಸಂಪರ್ಕಿಸಿ.

## ವಿದ್ಯುತ್ ವ್ಯತ್ಯಯ

**ದಾವಣಗೆರೆ:** ಆವರಗೆರೆ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ತುರ್ತಾ ನಿರ್ವಾಹಣಾ ಕಾರ್ಯವನ್ನು ಹಮ್ಮಿಕೊಂಡಿರುವುದರಿಂದ ನವೆಂಬರ್ 18 ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ಆವರಗೆರೆ ವಿದ್ಯುತ್ ವಿತರಣಾ ಕೇಂದ್ರದ ವ್ಯಾಪ್ತಿಯ ಆರ್.ಎಂ.ಸಿ. ಲಿಂಕ್ ರಸ್ತೆ, ಬಿ.ಟಿ. ಲೇಔಟ್, ಗುಜರಿ ಲೈನ್, ಬಂಬೂ ಬಜಾರ್, ಮಟ್ಟಿಕಲ್, ಬಿಡಿಓ ಕಛೇರಿ, ಇಮಾಮ್ ನಗರ, ಅಮರಪ್ಪನ ತೋಟ, ಆನೆಕೊಂಡ, ಎಲ್.ಬಿ.ಎಸ್. ನಗರ.ಟಿ.ಸಿ. ಲೇಔಟ್, ಬಿಟಿ ಲೇಔಟ್, ಕೆ.ಆರ್. ರಸ್ತೆ, ಇಮಾಮ್ ನಗರ, ಆನೆಕೊಂಡ, ಐನಳ್ಳಿ ಕಾಂಪೌಂಡ್, ಎಪಿಎಂಸಿ, ಭಾರತ್ ಕಾಲೋನಿ, ಶೇಖರಪ್ಪ ನಗರ ಹೆಚ್.ಕೆ.ಆರ್. ನಗರ, ಕಬ್ಬೂರು ಬಸಾಪುರ ನಗರ, ಅಣ್ಣಾ ನಗರ, ಬಸಾಪುರ ರಸ್ತೆ, ಗೋಶಾಲೆ, ಪಿ.ಬಿ. ರಸ್ತೆ, ರವಿ ಮಿಲ್ ಹಾಗೂ ಆವರಗೆರೆ, ಹೊನ್ನೂರು, ಐಗೂರು, ಮಲ್ಲಶೆಟ್ಟಿಹಳ್ಳಿ, ತೋಳಹುಣಸೆ, ಸುತ್ತಮುತ್ತಲಿನ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ತಿಳಿಸಿದೆ.

## ಐ.ಎ.ಎಸ್ ಮತ್ತು ಕೆ.ಎ.ಎಸ್ ಪರೀಕ್ಷೆಗಳಿಗೆ ತರಬೇತಿ

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ವತಿಯಿಂದ ಮೈಸೂರಿನ ಕೇಂದ್ರ ಕಚೇರಿಯಲ್ಲಿ ಕೇಂದ್ರ ಲೋಕ ಸೇವಾ ಆಯೋಗದವರು ನಡೆಸಲಿರುವ ಐಎಎಸ್ ಹಾಗೂ ಕೆಎಎಸ್ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ 50 ದಿನಗಳ ತರಬೇತಿಯನ್ನು ನಡೆಸಲಾಗುವುದು.

## ಪ್ರಮುಖ ಸುದ್ದಿ

### ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್‌ನಿಂದ 25ರಂದು ಕನ್ನಡ ರಾಜ್ಯೋತ್ಸವ

# ಪ್ರತಿಭಾಪುರಸ್ಕಾರ, ಸಾಧಕರಿಗೆ ಸನ್ಮಾನ: ಜಿ.ಟಿ.ವೀರಭದ್ರಸ್ವಾಮಿ

» **ಚಳ್ಳಕೆರೆ**

ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಮತ್ತೊಮ್ಮೆ ಕ್ರಿಯಾಶೀಲ ಚಟುವಟಿಕೆಗಳಿಗೆ ನಾಂದಿಯಾಡಿದ್ದು, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎಂ.ಶಿವಸ್ವಾಮಿ ಮಾರ್ಗದರ್ಶನದಲ್ಲಿ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಹಲವಾರು ವೈವಿಧ್ಯಮಯ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ ಎಂದು ಅಧ್ಯಕ್ಷ ಜಿ.ಟಿ.ವೀರಭದ್ರಸ್ವಾಮಿ ತಿಳಿಸಿದ್ದಾರೆ.

ಅವರು, ಪ್ರವಾಸಿಮಂದಿರದಲ್ಲಿ ಏರ್ಪಡಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ನ. 20ರಂದು ಆಷುಭಾಷಣ, ಪ್ರಬಂಧ ಸ್ಪರ್ಧೆಯನ್ನು ಕನ್ನಡ ನಾಡು, ನುಡಿಯ ಬಗ್ಗೆ ಜಾಗೃತಿಗೊಳಿಸುವ ವಿಚಾರದಲ್ಲಿ ಕಾರ್ಯಕ್ರಮವನ್ನು ವಿಶ್ವಭಾರತಿ ಪ್ರೌಢಶಾಲಾ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ.

ನ.25ರ ಶನಿವಾರ ಬಿಎಂ ಸರ್ಕಾರಿ



ಪ್ರೌಢಶಾಲಾ ಮೈದಾನದಲ್ಲಿ ನೃತ್ಯ ಕಾರ್ಯಕ್ರಮ ನಡೆಸಲಾಗುವುದು ಇದನ್ನು ಹೊರತು ಪಡಿಸಿ ಕನ್ನಡ ವಿಷಯದಲ್ಲಿ ಎಸ್‌ಎಸ್‌ಎಲ್‌ಸಿ 125ಕ್ಕೆ125, ಪಿಯುಸಿ, ಪದವಿಯಲ್ಲಿ 100ಕ್ಕೆ 100 ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಗುವುದು. ಕನ್ನಡ ಭಾಷೆಯ ಸರ್ವತೋಮುಖ ಬೆಳವಣಿಗೆಗೆ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಹಮ್ಮಿಕೊಳ್ಳುವ ಎಲ್ಲಾ ಕಾರ್ಯಕ್ರಮಗಳಿಗೆ ಕನ್ನಡಾಭಿಮಾನಿಗಳ ಸಂಘ ಸಂಸ್ಥೆಗಳು ಹೆಚ್ಚು ಪ್ರೋತ್ಸಾಹ ನೀಡಬೇಕೆಂದು ಮನವಿ ಮಾಡಿದ್ದಾರೆ.

ನ.25ರಂದು ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ವಾಲ್ಮೀಕಿ ವೃತ್ತದಿಂದ ವಿವಿಧ ಮುಖ್ಯರಸ್ತೆಗಳ ಮೂಲಕ ಬಿಎಂ ಸರ್ಕಾರಿ ಪ್ರೌಢಶಾಲೆದವರೆಗೂ ಬೃಹತ್ ಕಲಾತಂಡಗಳೊಂದಿಗೆ ಮೆರವಣಿಗೆ ಹಮ್ಮಿಕೊಂಡಿದ್ದು ಎಲ್ಲರೂ ಮೆರವಣಿಗೆಯಲ್ಲಿತಪ್ಪದೆಭಾಗವಹಿಸುವಂತೆ ಅವರು ಮನವಿ ಮಾಡಿದ್ದಾರೆ.

ಇದೇ ಸಂದರ್ಭದಲ್ಲಿ ಇತ್ತೀಚೆಗೆ ತಾನೇ ಕನ್ನಡ ರಾಜೋತ್ಸವ ಪ್ರಶಸ್ತಿ ಪಡೆದ ಪಿ.ತಿಪ್ಪೇಸ್ವಾಮಿಯವರನ್ನು ಕಾರ್ಯಕ್ರಮದಲ್ಲಿ ಸನ್ಮಾನಿಸಲಾಗುವುದು. ವಿವಿಧ ಕ್ಷೇತ್ರದಲ್ಲಿ ಕನ್ನಡಕ್ಕಾಗಿ ದುಡಿದ ಒಬ್ಬ ಮಹನೀಯರನ್ನು ಪ್ರತಿವರ್ಷವೂ ಗೌರವಿಸುವ ಕಾರ್ಯ ನಡೆಸಲು ನಿರ್ಧರಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಸಾಹಿತ್ಯ ಪರಿಷತ್ ಕಾರ್ಯದರ್ಶಿ ಡಾ.ಕೆ.ಚಿತ್ತಯ್ಯ, ಸಾಹಿತ್ಯ ಪರಿಷತ್ ಹೋಬಳಿ ಘಟಕದ ನಿರ್ದೇಶಕ ಎಂ.ಎನ್.ಮೃತ್ಯಂಜಯ, ರಾಜಶೇಖರ್ ಮುಂತಾದವರು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T